ವಿಜಯಪುರ | ಸಂಪುಟ 04 | ಸಂಚಿಕೆ 56 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಏಪ್ರಿಲ್, 17, 2026

ಇಂಡಿ ಉಪನೋಂದಣಾಧಿಕಾರಿಗಳು ಸಾರ್ವಜನಿಕರೊಂದಿಗೆ ಅಸಭ್ಯ ವರ್ತನೆ ಮಾಡುತ್ತಿದ್ದಾರೆ ಎಂದು ಸಾಕಷ್ಟು ಜನ ಹೇಳಿದ್ದಾರೆ. ಅವರು ತಮ್ಮ ವರ್ತನೆ ಬದಲಿಸಿಕೊಳ್ಳದಿದ್ದರೆ ಅವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಬೇಕಾಗುತ್ತದೆ."



■ ವಿಠ್ಠಲ ಕಟಕಧೋಂಡ ಶಾಸಕರು, ನಾಗಠಾಣ ಮತಕ್ಷೇತ್ರ

## ವಿಜಯಪುರ ಜಿಲ್ಲಾ ಮಟ್ಟದ ರಸಗೊಬ್ಬರ ಉತ್ಪಾದಕರು ಹಾಗೂ ಮಾರಾಟಗಾರರ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಆನಂದ ಕೆ. ಎಚ್ಚರಿಕೆ

# ರಸಗೊಬ್ಬರ ಕೃತಕ ಅಭಾವ ಸೃಷ್ಟಿಸಿದರೆ ನಿರ್ದಾಕ್ಷಿಣ್ಯ ಕ್ರಮ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಸಗೊಬ್ಬರ ಮಾರಾಟ ಸಂಬಂಧಿಸಿದಂತೆ ನಿಗದಿತ ದರಕ್ಕಿಂತ ಹೆಚ್ಚಿನ ದರ ವಸೂಲಿ, ಅಕ್ರಮ ದಾಸ್ತಾನು ಹಾಗೂ ಕೃತಕ ಅಭಾವ ಸೃಷ್ಟಿಸಿದರೆ ಸಂಬಂಧಪಟ್ಟವರ ವಿರುದ್ಧ ನಿಯಮಾನುಸಾರ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾ–ರಿಗಳಾದ ಡಾ. ಆನಂದ ಕೆ. ಅವರು ಎಚ್ಚರಿಕೆ ನೀಡಿದರು. ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ಬುಧವಾರ ನಡೆದ ಜಿಲ್ಲಾ ಮಟ್ಟದ ರಸಗೊಬ್ಬರ ಉತ್ಪಾದಕರು ಹಾಗೂ ಮಾರಾಟಗಾರರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ಎಲ್ಲ ರಸಗೊಬ್ಬರಗಳನ್ನು ಪಿಒಎಸ್ (ಪಾಯಿಂಟ್ ಆಫ್ ಸೇಲ್) ಯಂತ್ರದ ಮೂಲಕವೇ ಕಡ್ಡಾಯವಾಗಿ ಮಾರಾಟ ಮಾಡಿ ದಾಖಲಿಸಬೇಕು ಎಂದರು.

ಯೂರಿಯಾ ರಸಗೊಬ್ಬರ ಮಾರಾಟ ಮಾಡುವಾಗ ಕೃಷಿ ಇಲಾಖೆಯ ಕೆ–ಕಿಸಾನ್ ತಂತ್ರಾಂಶದ ಮೂಲಕ ಫ್ರುಟ್ಸ್ ಐಡಿ ಆಧಾರಿತ ಜಮೀನಿನ ವಿಸ್ತೀರ್ಣದ ಪ್ರಕಾರ, ಒಂದು ಎಕರೆಗೆ ಒಂದು ಚೀಲದಂತೆ ಮಾರಾಟ ಮಾಡಬೇಕು ಎಂದರು.

ರಸಗೊಬ್ಬರ ಮಳಿಗೆಗಳಲ್ಲಿ ಪಿಒಎಸ್ ದಾಖಲಾತಿ ಮತ್ತು ಭೌತಿ–ಕ ದಾಸ್ತಾನು ಹೊಂದಾಣಿಕೆ ಇರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದರು.

ರಸಗೊಬ್ಬರ ಮಾರಾಟಗಾರರು ತಮ್ಮ ಮಳಿಗೆಯ ಮುಂದೆ ಅಂದಿನ ರಸಗೊಬ್ಬರ ದರ ಹಾಗೂ ದಾಸ್ತಾನು ವಿವರಗಳನ್ನು ಸ್ಪಷ್ಟವಾಗಿ ಕಾಣುವಂತೆ ಫಲಕ ಪ್ರದರ್ಶಿಸುವುದು ಕಡ್ಡಾಯವಾಗಿದೆ ಎಂದರು.

ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ ಮಾತನಾಡಿ, ಮುಂಬರುವ ಮುಂಗಾರು ಹಂಗಾಮಿಗೆ ಜಿಲ್ಲೆಗೆ ಏಪ್ರಿಲ್ 2026 ದಿಂದ ಸೆಪ್ಟೆಂಬರ್ 2026 ರವರೆಗೆ ಒಟ್ಟು 1.27 ಲಕ್ಷ ಮೆಟ್ರಿಕ್ ಟನ್ ವಿವಿಧ ರಸಗೊಬ್ಬರಗಳ ಬೇಡಿಕೆ ಇದ್ದು,ದಿನಾಂಕ: 15.04.2026ರ ಸ್ಥಿತಿಗೆ ಜಿಲ್ಲೆಯಲ್ಲಿ ಒಟ್ಟು 64,337 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದ್ದು, ಅದರಲ್ಲಿ ಮುಖ್ಯವಾಗಿ 16,442 ಮೆಟ್ರಿಕ್ ಟನ್ ಯೂರಿಯಾ, 9,871 ಮೆಟ್ರಿಕ್ ಟನ್ ಡಿ.ಎ.ಪಿ ಹಾಗೂ 32,466 ಮೆಟ್ರಿಕ್ ಟನ್ ಕಾಂಪ್ಲೆಕ್ಸ್ ರಸಗೊಬ್ಬರಗಳ ದಾಸ್ತಾನು ಇದೆ. ಮಾಹೆವಾರು ಸರಬರಾಜು ಯೋಜನೆಯಂತೆ ಜಿಲ್ಲೆಗೆ ರಸಗೊಬ್ಬರ ಪೂರೈಕೆ ಆಗುತ್ತಿದ್ದು, ಸಮರ್ಪಕ ವಿತರಣೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ರಸಗೊಬ್ಬರ ಮಾರಾಟಗಾರರಿಗೆ ಸೂಚಿಸಿದರು. ಜಿಲ್ಲೆಯು ಅಂತಾರಾಜ್ಯ ಗಡಿಭಾಗದಲ್ಲಿರುವುದರಿಂದ ಗಡಿಭಾಗಗಳಲ್ಲಿ ಚೆಕ್ ಪೋಸ್ಟ್ ಗಳ ಮೂಲಕ ಯೂರಿಯಾ ಅನಧಿಕೃತ ಸಾಗಾಣಿಕೆಗೆ ನಿಗಾ ವಹಿಸಲಾಗುತ್ತಿದೆ. ಪ್ರತಿವಾರ ವಿಡಿಯೋ ಕಾನ್ಫರೆನ್ಸ್ ಸಭೆಗಳ ಮೂಲಕ ರಸಗೊಬ್ಬರ ಪೂರೈಕೆ, ಮಾರಾಟ ಹಾಗೂ ದಾಸ್ತಾನು ಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದರು.

ಯೂರಿಯಾ ಹಾಗೂ ಡಿ.ಎ.ಪಿ ರಸಗೊಬ್ಬರಗಳಿಗೆ ಪರ್ಯಾಯವಾಗಿ ನ್ಯಾನೋ ಯೂರಿಯಾ ಮತ್ತು ನ್ಯಾನೋ ಡಿ.ಎ.ಪಿ ಬಳಕೆಗೆ ಉತ್ತೇಜನ ನೀಡುವಂತೆ ಮಾರಾಟಗಾರರಿಗೆ ಸೂಚನೆ ನೀಡಲಾಗಿದೆ ಎಂದರು. ಏಪ್ರಿಲ್ 2026 ರಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಯೂರಿಯಾ ಮತ್ತು ಡಿ.ಎ.ಪಿ ಮಾರಾಟ ಮಾಡಿದ ಕೆಲ ರಸಗೊಬ್ಬರ ಮಾರಾಟಗಾರರಿಗೆ ಈಗಾಗಲೇ ನೋಟಿಸ್ ಜಾರಿಗೊಳಿಸಲಾಗಿದೆ ಎಂದು ಜಂಟಿ ನಿರ್ದೇಶಕರು ಸಭೆಗೆ ವಿವರಿಸಿದರು.

ಸಭೆಯಲ್ಲಿ ರಸಗೊಬ್ಬರ ಉತ್ಪಾದಕ ಕಂಪನಿಗಳ ಪ್ರತಿನಿಧಿಗಳು, ಸಗಟು ಹಾಗೂ ಚಿಲ್ಲರೆ ರಸಗೊಬ್ಬರ ಮಾರಾಟಗಾರರು, ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಹಾಗೂ ವಿಭಾಗೀಯ ಉಪ ಕೃಷಿ ನಿರ್ದೇಶಕರು ಪಾಲ್ಗೊಂಡಿದ್ದರು.

# ಕೂಲಿಕಾರನ ಮಗಳು ಸರಸ್ವತಿ ನಿಡೋಣಿ ತಾಲೂಕಿಗೆ ಪ್ರಥಮ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ತಾಲೂಕಿನ ಚವಡಿಹಾಳ ಗ್ರಾಮದ ಶ್ರೀ ಭಾಗ್ಯವಂತಿ ಪದವಿಪೂರ್ವ ಮಹಾವಿದ್ಯಾಲಯದ ಕಲಾ ವಿಭಾಗದ ವಿದ್ಯಾರ್ಥಿನಿ ಸರಸ್ವತಿ ಶಿವರಾಜ ನಿಡೋಣಿ ಪಿಯು ಪರೀಕ್ಷೆಯಲ್ಲಿ 588 ಅಂಕ ಪಡೆದು ತಾಲೂಕಿಗೆ ಪ್ರಥಮ ಸ್ಥಾನ ಮತ್ತು ಜಿಲ್ಲೆಗೆ 8 ನೆಯ ಸ್ಥಾನ ಪಡೆದಿದ್ದಾಳೆ.

ಅವಳ ತಂದೆ ಶಿವರಾಯ ಮತ್ತು ತಾಯಿ ವಿಮಲಾ ಇಬ್ಬರೂ ಬೇರೆ ರೈತರ ಹೊಲದಲ್ಲಿ ಕೂಲಿ ಕೆಲಸ ಮಾಡಿ ಜೀವನ ಸಾಗಿಸುತ್ತಿದ್ದಾರೆ. ಇರಲು ಸ್ವಂತ ಮನೆಯಿಲ್ಲ. ಮನೆಯಲ್ಲಿ ಕಡು ಬಡತನ, ಸರಸ್ವತಿ ಶಾಲೆಗೆ ಚಪ್ಪಲ ಇಲ್ಲದೆ ಹೋಗಿರುವ ಪ್ರಸಂಗ ಹೆಚ್ಚು.

ಶಾಲೆ ತೋಟದಿಂದ ಮೂರು ಕಿಮಿ ದೂರದಲ್ಲಿದೆ. ಪ್ರತಿದಿನ ನಡೆದುಕೊಂಡು ಹೋಗುತ್ತಿದ್ದಳು.

ಬೆಳಗ್ಗೆ ಶಾಲೆ 9 ಗಂಟೆಯಿಂದ 5 ಗಂಟೆಯ ವರೆಗೆ ನಂತರ 5 ಗಂಟೆಯಿಂದ 8 ಗಂಟೆಯ ವರೆಗೆ ವಿಶೇಷ ತರಗತಿಗೆ ಹೋಗುತ್ತಿದ್ದಳು. ನಂತರ ಮನೆಯಲ್ಲಿ ಬಂದು 10 ಗಂಟೆಯ ವರೆಯ ಅಭ್ಯಾಸ ಮಾಡುತ್ತಿದ್ದಳು. ಹೊಲದಲ್ಲಿ ವಿದ್ಯುತ್ 10 ಗಂಟೆಯ ವರೆಗೆ ಮಾತ್ರ ಇರುವದರಿಂದ 10 ಗಂಟೆಗೆ ಮಲಗಿ ನಂತರ ಬೆಳಿಗ್ಗೆ 5 ಗಂಟೆಗೆ ಎದ್ದು 7 ಗಂಟೆಯ ವರೆಗೆ ಅಭ್ಯಾಸ. ನಂತರ ತಂದೆ ತಾಯಿ ಕೆಲಸದ ಹೋದ ನಿಮಿತ್ಯ ಮನೆ ಕೆಲಸ ಈಕೆಯೇ ಮಾಡಬೇಕು.

ಸರಸ್ವತಿ ರಾಜ್ಯಶಾಸ್ತ್ರ, ಸಮಾಜ ಶಾಸ್ತ್ರ, ಇತಿಹಾಸ ವಿಷಯದಲ್ಲಿ 100 ಕ್ಕೆ ನೂರು ಅಂಕಗಳು ಮತ್ತು ಕನ್ನಡ ಅರ್ಥಶಾಸ್ತ್ರದಲ್ಲಿ 99ಅಂಕಗಳು ಇಂಗ್ಲೀಷ ವಿಷಯದಲ್ಲಿ ಮಾತ್ರ 90 ಅಂಕಗಳು.

ಸರಸ್ವತಿಗೆ ಒಬ್ಬ ತಮ್ಮ ಮತ್ತು ಮೂವರು ಸಹೋದ–ರಿಯರು. ಶಿಕ್ಷಕರ ಸಹಕಾರ ಮತ್ತು ಸಹಪಾಠಿಗಳ ಸಹಕಾರ ಮತ್ತು ಮನೆಯವರ ಸಹಕಾರದಿಂದ ತಾನು ಪರೀಕ್ಷೆಯಲ್ಲಿ ಯಶಸ್ವಿಯಾಗಿರುವದಾಗಿ ಹೇಳುತ್ತಾಳೆ.

> "ಸರಸ್ವತಿ ಬಡ ವಿದ್ಯಾರ್ಥಿನಿ ಹೀಗಾಗಿ ಅವಳಿಗೆ ಫೀ ಹೆಚ್ಚು ಪಡೆದಿಲ್ಲ. ಅದಲ್ಲದೆ ಅವಳಿಗೆ ಎಲ್ಲ ಶಿಕ್ಷಕರು ಅಭ್ಯಾಸದಲ್ಲಿ ಸಹಕಾರ ನೀಡಿದ್ದು ಹೆಚ್ಚು ಅಂಕ ಪಡೆಯಲು ಸಾದ್ಯವಾಗಿದೆ."
>
> ■ ಚಂದ್ರಶೇಖರ ದಶವಂತ
>
> ಮುಖ್ಯ ಗುರು, ಬಾಗ್ಯವಂತಿ ಪಪೂ ವಿದ್ಯಾಲಯ, ಚವಡಿಹಾಳ

# ಸಾಯಿ ಶಾಲೆಯಲ್ಲಿ ಗಮನ ಸೆಳೆಯುತ್ತಿರುವ ಎಐ ಟೀಚರ್

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಶೈಕ್ಷಣಿಕ ವಲಯ ವ್ಯಾಪ್ತಿಗೊಳಪಟ್ಟ ಸಾಯಿ ಖಾಸಗಿ ಪ್ರೌಢ ಶಾಲೆಯಲ್ಲಿ ಎಐ ಟೀಚರ್ ಗಮನ ಸೆಳೆಯುತ್ತಿದೆ. ತಾಲೂಕಿನಲ್ಲಿಯೇ ಖಾಸಗಿ ಶಾಲೆ ವಿದ್ಯಾರ್ಥಿಗಳ ಬೋಧನೆಗೆ ಎಐ ಟೀಚರ್ ಆದಿತಿ ಯನ್ನು ಪರಿಚಯಿಸುವ ದಿಟ್ಟ ಹೆಜ್ಜೆ ಇಟ್ಟಿದೆ. ಸಾಯಿ ಶಾಲೆಯಲ್ಲಿ ಆರ್ಟಿಫಿಶಿಯಲ್ ಇಂಟೆಲಿಜೆನ್ಸ ಶಿಕ್ಷಕಿ ಕಾರ್ಯ ನಿರ್ವಹಣೆ ಸಜ್ಜಾಗಿದ್ದು ಏ.12 ರಂದು ವಿದ್ಯುಕ್ತ ಚಾಲನೆ ನೀಡಲಾಗಿದೆ. ನೀತಿ ಆಯೋಗ ಪ್ರಾರಂಭಿಸಿದ ಅಟಲ್ ಟಿಂಕರಿಂಗ್ ಲ್ಯಾಬ್ ಯೋಜನೆಯಡಿ ನಿರ್ಮಿಸಿಲಾದ ಆದಿತಿ ಸಾಂಪ್ರದಾಯಿಕ ಬೋಧನಾ ವಿಧಾನಗಳನ್ನು ಕ್ರಾಂತಿಗೊಳಿಸುವ ಗುರಿ ಹೊಂದಿರುವ ಹಲವಾರು ವೈಶಿಷ್ಟಗಳನ್ನು ಹೊಂದಿದೆ. 20 ಭಾಷೆಗಳನ್ನು ಮಾತನಾಡುವ ಮತ್ತು ಪ್ರಶ್ನೆಗಳನ್ನು ನಿಭಾಯಿಸುವ ಸಾಮರ್ಥ್ಯದೊಂದಿಗೆ ಆದಿತಿ ಪ್ರತಿ ವಿದ್ಯಾರ್ಥಿಗೆ ಕಲಿಕೆಯ ಅನುಭವ ನೀಡುತ್ತದೆ. ಸೀರೆಯಲ್ಲಿ ಕಂಗೊಳಿಸಿದ ಆದಿತಿ ಎಐ ಶಿಕ್ಷಕಿ ವಿದ್ಯಾರ್ಥಿಗಳ ಸಂವಾದ ನಡೆಸುತ್ತದೆ. ಕೈ ಕುಲುಕುತ್ತದೆ. ವಿದ್ಯಾರ್ಥಿಗಳಿಗೆ ಬಹುಬೇಗ ಇಷ್ಟವಾಗುತ್ತದೆ. ಮಗು ಯಾವದೇ ಪ್ರಶ್ನೆ ಕೇಳಿದರೂ ಎಐ ಶಿಕ್ಷಕಿ ಥಟ್ ಅಂತ ಉತ್ತರ ಹೇಳುತ್ತದೆ. ವಿಶೇಷವಾಗಿ ಇಂಗ್ಲೀಷ್ ಕಲಿಕೆಗೆ ಹೆಚ್ಚು ಪೂರಕವಾಗಲಿದೆ. ಎಜುಕೇಷನ್ ಕನ್ಸಲಟನ್ಸಿಯವರ ಜೊತೆಗೆ ಒಪ್ಪಂದ ಮಾಡಿಕೊಂಡು ಬೆಂಗಳೂರಿನಿಂದ ಆನ್ ಲೈನ್ ತರಬೇತಿ ನಡೆಯುತ್ತದೆ.



## ಜಿಲ್ಲಾ ನಿರ್ವಹಣಾ ಸಮಿತಿ ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಹೇಳಿಕೆ

# ಏ. 23 ರಿಂದ ಜಾನುವಾರುಗಳ ಕಾಲು ಬಾಯಿ ಜ್ವರಕ್ಕೆ ಉಚಿತ ಲಸಿಕಾ ಅಭಿಯಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಇದೇ ಏ.23 ರಿಂದ ಮೇ.22 ರವರೆಗೆ ಜಿಲ್ಲೆಯಲ್ಲಿ 9ನೇ ಸುತ್ತಿನ ಕಾಲು ಬಾಯಿ ರೋಗದ ಉಚಿತ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ತಿಳಿಸಿದ್ದಾರೆ.




ಗುರುವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ 2025–26ನೇ ಸಾಲಿನ ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಕಾರ್ಯಕ್ರಮ ಯೋಜನೆಯಡಿ 9ನೇ ಸುತ್ತಿನ ಕಾಲುಬಾಯಿ ಜ್ವರ ರೋಗದ ಲಸಿಕಾ ಕಾರ್ಯಕ್ರಮದ ಜಿಲ್ಲಾ ನಿರ್ವಹಣಾ ಸಮಿತಿ ಸಭೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾದ ಅಭಿಯಾನದಲ್ಲಿ ರೈತರು, ಹಾಲು ಉತ್ಪಾದಕರ ಸಂಘಗಳು ಭಾಗವಹಿಸಿ ತಮ್ಮ ಜಾನುವಾರುಗಳಿಗೆ ಕಾಲು ಬಾಯಿ ರೋಗದ ಲಸಿಕೆ ಹಾಕಿಸುವುದರ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಜಾನುವಾರುಗಳಿಗೆ ಆರೋಗ್ಯ ಸಮಸ್ಯೆ ಉಂಟಾದಲ್ಲಿ 1962 ಪಶು ಸಹಾಯವಾಣಿಗೆ ಕರೆ ಮಾಡಿ ಉಚಿತ ಅಂಬ್ಯುಲೆನ್ಸ್ ಸೇವೆ ಪಡೆದುಕೊಳ್ಳಬಹುದಾಗಿದೆ. ಕಾಲು ಬಾಯಿ ರೋಗವು ಎತ್ತು, ಹೋರಿ, ಹಸು ಹಾಗೂ ಎಮ್ಮೆ ಉಂಟಾದರೆ ಆರ್ಥಿಕ ನಷ್ಟ ಉಂಟಾಗುತ್ತದೆ. ಅಲ್ಲದೆ ರೋಗದಿಂದ ಗುಣಮುಖವಾದ ಜಾನುವಾರುಗಳಿಗೆ ಗರ್ಭಕಟ್ಟುವಿಕೆಯಲ್ಲಿ ವಿಳಂಬ ಉಂಟಾಗುತ್ತದೆ. ಜೊತೆಗೆ ಹಾಲಿನ ಇಳುವರಿ ಕಡಿಮೆಯಾಗುವ ಸಾಧ್ಯತೆಯಿದೆ. 3 ತಿಂಗಳ ಮೇಲ್ಪಟ್ಟ ಎಲ್ಲಾ ಜಾನುವಾರುಗಳಿಗೆ ಲಸಿಕೆ ಹಾಕುವುದು ಅಗತ್ಯವಿದೆ ಎಂದು ಹೇಳಿದರು

ಈ ಕಾಲು ಬಾಯಿ ಲಸಿಕೆಯನ್ನು ವರ್ಷಕ್ಕೆ 2 ಬಾರಿ ಹಾಕಲಾಗುತ್ತದೆ. ಒಂದು ತಿಂಗಳು ನಡೆಯುವ ಈ ಅಭಿಯಾನದಲ್ಲಿ ಲಸಿಕೆದಾರರು ಬೆಳಗ್ಗೆ 7 ಗಂಟೆಯಿಂದ 10 ಗಂಟೆವರೆಗೆ ಲಸಿಕೆದಾರರಿಗೆ ಲಸಿಕೆ ಹಾಕುವರು. ಈ ಬಾರಿ ಭಾರತ ಪಶುಧನ್ ಪ್‌ನಲ್ಲಿ ಲಸಿಕೆದಾರರು ಲಸಿಕೆ ಹಾಕಿದ ಮಾಹಿತಿಯನ್ನು ಅಪ್‌ಲೋಡ್ ಮಾಡಲು ಅವಕಾಶ ಇರುತ್ತದೆ. ಈ ಅಭಿಯಾನದಲ್ಲಿ ದಿನಕ್ಕೆ 7000 ಜಾನುವಾರುಗಳಿಗೆ ಹಾಕುವ ಗುರಿ ಹೊಂದಿದ್ದು, ಕಳೆದ ಬಾರಿ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮದಲ್ಲಿ ಶೇ100 ರಷ್ಟು ಗುರಿ ಸಾಧನೆ ಮಾಡಲಾಗಿದೆ. ಅಲ್ಲದೆ 1962ರ ಪಶು ಅಂಬ್ಯುಲೆನ್ಸ್ ಕಾರ್ಯನಿರ್ವಹಿಸುತ್ತಿದೆ ಎಂದರು.

ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕರಾದ ಡಾ. ರೇವಣಸಿದ್ದಪ್ಪ ಪದರಾ ಮಾತನಾಡಿ, ಜಿಲ್ಲೆಯಲ್ಲಿ 132843 ದನಗಳು, 135773 ಎಮ್ಮೆಗಳು ಒಟ್ಟು 268613 ಜಾನುವಾರುಗಳಿಗೆ ಉಚಿತವಾಗಿ ಲಸಿಕೆ ನೀಡುವ ಗುರಿಯನ್ನು ಹೊಂದಲಾಗಿದೆ. ಜಿಲ್ಲೆಯಲ್ಲಿ ಕಾಲು ಬಾಯಿ ಜ್ವರಕ್ಕೆ ಲಸಿಕೆ ನೀಡುವ ತಂಡಗಳನ್ನು ರಚಿಸಲಾಗಿದೆಯಂದು ತಿಳಿಸಿದರು.

ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ಹಾಗೂ ರೈತಾಪಿ ವರ್ಗದವರು ಮೊಬೈಲ್ ಸಂಖ್ಯೆ 8277100200 ಸಂಪರ್ಕಿಸಬಹುದೆಂದು ತಿಳಿಸಿದರು. ಈ ಸಂದರ್ಭದಲ್ಲಿ 9ನೇ ಸುತ್ತಿನ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮದ ಕರ ಪತ್ರ, ಭಿತ್ತಿ ಪತ್ರ ಬಿಡುಗಡೆಗೊಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಪಶುಸಂಗೋಪನಾ ಇಲಾಖೆಯ ಉಪ ನಿರ್ದೇಶಕರು ಮತ್ತು ಮುಖ್ಯ ಪಶುವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಇಂಡಿ ಉಪನೋಂದಣಾಧಿಕಾರಿಗಳ ವರ್ತನೆಗೆ ಸಾರ್ವಜನಿಕರ ಬೇಸರ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ನಗರದ ಉಪನೋಂದಣಾಧಿಕಾರಿಗಳ ಕಾರ್ಯಾಲಯದ ಅಧಿಕಾರಿ ಅಂಜಲಿ ಸಿ. ಅವರ ವರ್ತನೆಗೆ ಸಾರ್ವಜನಿಕರು ಬೇಸತ್ತಿದ್ದಾರೆ.

ಸಾರ್ವಜನಿಕರು ತಮ್ಮ ಖಾತೆ ಬದಲಾವಣೆ ಸೇ–ರಿದಂತೆ ಇನ್ನಿತರ ಕಾರ್ಯಕ್ಕಾಗಿ ಉಪನೋಂದಣಾಧಿಕಾ–ರಿಗಳ ಬಳಿ ಹೋದರೆ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸದೆ ಬಾಯಿಗೆ ಬಂದಂತೆ ಮಾತನಾಡುತ್ತಾರೆ ಎಂದು ಸಾಕಷ್ಟು ನಾಗರಿಕರು ಆರೋಪಿಸಿದ್ದಾರೆ.

ಬುಧವಾರ ಸೊನಕನಳ್ಳಿ ಗ್ರಾಮದ ಭೀಮಾಶಂಕರ ವಿಲಾಸ ವಾಲೀಕಾರ ಎಂಬ ರೈತ ತಮ್ಮ ಜಮೀನಿನ ಪಹಣಿಯಲ್ಲಿ ಭೋಜಾ ದಾಖಲು ಮಾಡಿಸಲು ಆನ್‌ಲೈನ್ ಅಪ್ಲಿಕೇಶನ್ ಹಾಕುವ ಸಂದರ್ಭದಲ್ಲಿ ಗ್ರಾಮದ ಹೆಸರು ಸೊನಕನಹಳ್ಳಿ ಬದಲಾಗಿ ಬೆನಕನಹಳ್ಳಿ ಎಂದು ದಾಖಲಾಗಿತ್ತು. ಅದನ್ನು ತಿದ್ದುಪಡಿ ಮಾಡಲು ಉಪನೋಂದಣಾಧಿಕಾ–ರಿಗಳ ಕಚೇರಿಗೆ ತೆರಳಿ ಅಲ್ಲಿದ್ದ ಉಪನೋಂದಣಾಧಿಕಾರಿ ಅಂಜಲಿ ಸಿ ಅವರನ್ನು ಆನ್‌ಲೈನ್ ಹಾಕುವಾಗ ಈ ತಪ್ಪಾಗಿದೆ ಇದಕ್ಕೆ ತಿದ್ದುಪಡಿ ಹೇಗೆ ಮಾಡಬೇಕೆಂದು ಕೇಳಿದಾಗ ಆತನೊಂದಿಗೆ ಅಸಭ್ಯ, ಅಶ್ಲೀಲ ಪದಗಳಿಂದ ಮಾತನಾಡಿದ್ದಾರೆ. ಅಲ್ಲದೆ ಆನ್‌ಲೈನ್ ಅಪ್ಲಿಕೇಶನ್ ಹಾಕಿದ್ದು ಆನ್‌ಲೈನ್ ಅಂಗಡಿಯವನೂ ಸಹ ಕಚೇ–ರಿಗೆ ತೆರಳಿ ಹೀಗೆ ತಪ್ಪಾಗಿದೆ ಮೇಡಂ ಅದನ್ನು ತಿದ್ದುಪಡಿ ಮಾಡಲು ನಿಮ್ಮಲ್ಲಿ ಅವಕಾಶವಿದೆ ಮಾಡಿಕೊಡಿ ಎಂದು ಕೇಳಿದಾಗ ಆತನ ಮೇಲೆಯೂ ರೇಗಾಡಿದ್ದಾರೆ. ಅಲ್ಲಿದ್ದ ಸಾರ್ವಜನಿಕರ ಮಧ್ಯಯೇ ಉಪನೋಂದಣಾಧಿಕಾರಿಗಳು ರೇಗಾಡಿದ್ದಲ್ಲದೆ ಪೊಲೀಸರನ್ನು ಕರೆಯಿಸಿ ನಿಮ್ಮ ಮೇಲೆ ಪ್ರಕರಣ ದಾಖಲಿಸುತ್ತೇನೆ ಎಂದು ಪೊಲೀಸರಿಗೂ ಕರೆಸಿದ್ದಾರೆ. ಪೊಲೀಸರನ್ನು ಕರೆಸಿ ಎಲ್ಲರನ್ನೂ ಹೆದರಿಸುವ ಕಾರ್ಯ ಮಾಡುತ್ತಿದ್ದಾರೆ. ಈ ಮಹಿಳಾ ಅಧಿಕಾರಿಯ ದೌರ್ಜನ್ಯಕ್ಕೆ ಸಾರ್ವಜನಿಕರು ಬೇಸತ್ತು ಹೋಗಿದ್ದಾರೆ.




### ಏಜೆಂಟರ ಹಾವಳಿ

ಕಚೇರಿಯಲ್ಲಿ ಏಜೆಂಟರ ಹಾವಳಿ ಹೆಚ್ಚಾಗಿದೆ. ಏಜೆಂಟರ ಮುಖಾಂತರವಾಗಿ ಬಂದರೆ ಕೆಲಸಗಳು ಬಹಳ ಬೇಗನೆ ಮುಗಿಯುತ್ತವೆ ನೀರಾವರಿ ಜಮೀನು ಇದ್ದರೂ ಅದನ್ನು ಒಣಬೇಸಾಯದ ವ್ಯಾಲ್ಯೂವೇಶನ್ ಮೂಲಕ ಖರೀದಿ ಹಾಕುತ್ತಾರೆ. ನೇರವಾಗಿ ಹೋದರೆ ನೀರಾವರಿ ವ್ಯಾಲ್ಯೂವೇಶನ್ ಹಾಕಿ ಚಲನ್ ತೆಗೆಯುವಂತೆ ತಿಳಿಸುತ್ತಾರೆ. ಹೀಗಾಗಿ ಜನ ಏಜೆಂಟರ ಮುಖಾಂತರೇ ಕೆಲಸ ಮಾಡಿಕೊಳ್ಳಬೇಕಾದ ಅನಿವಾರ್ಯತೆ ಎದುರಾಗಿದೆ.

ಉದಾಹರಣೆ: ನಾಲ್ಕು ಎಕರೆ ನೀರಾವರಿ ಜಮೀನು ಬೇರೆಯವರಿಗೆ ಖರೀದಿ ಹಾಕಬೇಕಾದರೆ ಸರಕಾರಕ್ಕೆ ನೀರಾವರಿ ಚಲನ್ 60680 ರೂ ಚಲನ್ ತೆಗೆಯಬೇಕು. ಆದರೆ ಏಜೆಂಟರ ಮುಖಾಂತರ ಹೋದರೆ ಅದೇ ಜಮೀನನ್ನು ಒಣಬೇಸಾಯದಲ್ಲಿ 30680 ರೂ ಚಲನ್ ತೆಗೆದು ಹೆಚ್ಚುವರಿಯಾಗಿ 15 ಸಾವಿರ ರೂಪಾಯಿ ಹಣ ಪಡೆದು ಕೆಲಸ ಮಾಡಿಕೊಡುತ್ತಾರೆ. ಇಂತಹ ಸಾವಿರಾರು ಪ್ರಕರಣಗಳು ಈ ಕಚೇರಿಯಲ್ಲಿ ನಡೆದಿದೆ ಎನ್ನುತ್ತಾರೆ ಸಾರ್ವಜನಿಕರು.

> "ಇಂಡಿ ಉಪನೋಂದಣಾಧಿಕಾರಿಗಳ ಕಾರ್ಯಾಲಯದಲ್ಲಿ ಅಧಿಕಾರಿ ಅಂಜಲಿ ಸಿ ಅವರು ಸಾರ್ವಜನಿಕರಿಗೆ ಸರಿಯಾಗಿ ಸ್ಪಂದನೆ ಮಾಡುತ್ತಿಲ್ಲ. ಅಸಭ್ಯವಾಗಿ ವರ್ತಿಸುತ್ತಿದ್ದಾರೆ. ಅಲ್ಲದೆ ಏಜೆಂಟರ ಮೂಲಕ ಕಾರ್ಯ ಮಾಡುತಿದ್ದಾರೆ ಎಂಬ ಆರೋಪವಿದೆ.ಅವರನ್ನು ಕೂಡಲೆ ಸರಕಾರ ಅಮಾನತ್ತು ಮಾಡಬೇಕು."
>
> ■ ಎಸ್.ಬಿ. ಕೆಂಬೋಗಿ
>
> ಜಿಲ್ಲಾಧ್ಯಕ್ಷರು, ರೈತ ಸಂಘ ಹಾಗೂ ಹಸಿರು ಸೇನೆ

> ಇಂಡಿ ಉಪ ನೋಂದ ಣಾಧಿಕಾರಿಗಳು ಸಾರ್ವಜನಿಕರೊಂದಿಗೆ ಅಸಭ್ಯ ವರ್ತನೆ ಮಾಡುತ್ತಿದ್ದಾರೆ ಎಂದು ಸಾಕಷ್ಟು ಜನ ಹೇಳಿದ್ದಾರೆ. ಅದರಲ್ಲಿ ನನ್ನ ಕ್ಷೇತ್ರದ ಜನರೇ ಹೆಚ್ಚಿಗೆ ಬರುತ್ತಾರೆ. ಅವರು ತಮ್ಮ ವರ್ತನೆ ಬದಲಿಸಿಕೊಳ್ಳಬೇಕು. ಇಲ್ಲವಾದರೆ ಅವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಬೇಕಾಗುತ್ತದೆ."
>
> ■ ವಿಠ್ಠಲ ಕಟಕಧೋಂಡ ಶಾಸಕರು, ನಾಗಠಾಣ ಮತಕ್ಷೇತ್ರ.

# ಸಮುದಾಯ ಆರೋಗ್ಯ ಕೇಂದ್ರ ಉದ್ಘಾಟನೆಗೆ ಆಗ್ರಹಿಸಿ ಮನವಿ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರ ಕೂಡಲೇ ಉದ್ಘಾಟನೆ ಮಾಡುವಂತೆ ಆಗ್ರಹಿಸಿ ನಮ್ಮ ಕರ್ನಾಟಕ ಸೇನೆ ಹಾಗೂ ರೈತಸಂಘ ಪದಾಧಿಕಾರಿಗಳು ತಹಶೀಲ್ದಾರ ನಿಂಗಪ್ಪ ಬಿರಾದಾರ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯಕ್ಕೆ ಬುಧವಾರ ಆಗಮಿಸಿದ ನಮ್ಮ ಕರ್ನಾಟಕ ಸೇನೆ ಹಾಗೂ ರೈತಸಂಘದ ಪದಾಧಿಕಾರಿಗಳು ಸಮುದಾಯ ಆರೋಗ್ಯ ಕೇಂದ್ರದ ಉದ್ಘಾಟನೆ ಕು–ರಿತು ತಹಶೀಲ್ದಾರರ ಗಮನ ಸೆಳೆದರು.

ಈ ಸಂದರ್ಭದಲ್ಲಿ ರಾಜ್ಯ ರೈತಸಂಘದ ಯುವ ಸಂಚಾಲಕ ಸಿದ್ಧನಗೌಡ ಪಾಟೀಲ ಮಾತನಾಡಿ, ಸಮುದಾಯ ಆರೋಗ್ಯ ಕೇಂದ್ರದ ನೂತನ ಕಟ್ಟಡ ಪೂರ್ಣಗೊಂಡು 6 ತಿಂಗಳಾದರೂ ಶಾಸಕರಾಗಲಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಉದ್ಘಾಟನೆಗೆ ಕ್ರಮ ವಹಿಸುತ್ತಿಲ್ಲ. ಈ ಬಗ್ಗೆ ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರನ್ನು ಭೇಟಿ ಮಾಡಿ ಮನವಿ ಮಾಡಿದ್ದೇವೆ ಅದಾಗ್ಯೂ ಯಾವುದೇ ನಿರ್ಧಾರವಾಗಿಲ್ಲ. ಹೀಗೆ ಉದ್ಘಾಟನೆಗೆ ವಿಳಂಬ ಮಾಡಿದ್ದಲ್ಲಿ ಇದೇ ದಿ:30 ರಿಂದ ತಹಶೀಲ್ದಾರ ಕಾರ್ಯಾಲಯದ ಮುಂದೆ ಸಂಘಟನೆಗಳಿಂದ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿ ಮನವಿ ಸಲ್ಲಿಸಿದರು.

ನಮ್ಮ ಕರ್ನಾಟಕ ಸೇನೆ ತಾಲ್ಲೂಕು ಘಟಕದ ಅಧ್ಯಕ್ಷ ಹಸನ್ ನಧಾಫ್, ಅವೋಗೇಶ್ವರಶ್ರೀ, ಹಮೀದ್ ಮುಲ್ಲಾ, ಶಂಕರಗೌಡ ಹಿರೇಗೌಡರ, ಚಿದಾನಂದ ಬಜಂತ್ರಿ, ದಾವಲ್‌ಸಾಬ್ ಹೆಬ್ಬಾಳ, ಸಂಗನಗೌಡ ಬಿರಾದಾರ, ಮಲ್ಲಿಕಾರ್ಜುನ ಬಜಂತ್ರಿ, ದಾದಾ ಬೇಪಾರಿ, ಅಬೂಬಕರ್ ಯಲಗಾರ, ಮಲ್ಲು ಬಿರಾದಾರ ಇದ್ದರು.



# ಬಸವೇಶ್ವರ ಪ.ಪೂ ಕಾಲೇಜಲ್ಲಿ ಡಾ.ಅಂಬೇಡ್ಕರ್ ಜಯಂತಿ

■ ಉದಯರಶ್ಮಿ ದಿನಪತ್ರಿಕೆ

ಕಲಕೇರಿ: ಗ್ರಾಮದ ಮಲ್ಲಿಕಾರ್ಜುನ ವಿಧ್ಯಾವರ್ಧಕ ಸಂಘದ ಅಡಿಯಲ್ಲಿ ನಡೆಯುತ್ತಿರುವ ಅನುಧಾನಿತ ಬಸವೇಶ್ವರ ಪದವಿ ಪೂರ್ವ ಕಾಲೇಜು ಹಾಗೂ ಪ್ರೌಢಶಾಲೆ, ಪ್ರಾಥಮಿಕ ಶಾಲೆ, ಪದವಿ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135 ನೇ ಜಯಂತ್ಯೋತ್ಸವವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಶಾಂತಗೌಡ ಪಾಟೀಲ ಮಾತನಾಡಿ ಮಹಾನ್ ಮಾನವತಾವಾದಿ, ಭಾರತ ರತ್ನ, ಜ್ಞಾನ ಸೂರ್ಯ ಡಾ.ಬಿ ಆರ್ ಅಂಬೇಡ್ಕರ್ ಅವರ ತತ್ವ ಮತ್ತು ಆದರ್ಶಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಬೇಕಿದೆ ಎಂದು ಹೇಳಿದರು.

ಬಸವೇಶ್ವರ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಬಿ ಜಿ ಚನಗೊಂಡ, ಪದವಿ ಕಾಲೇಜಿನ ಪ್ರಾಚಾರ್ಯ ಜಗದೀಶ ಕಾದಳ್ಳಿ, ಶಿವಾನಂದ ಹರಿ-ಜನ್ ಮಾತನಾಡಿರು.

ಕಾರ್ಯಕ್ರಮದಲ್ಲಿ ಎಸ್ ಬಿ ಪಾಟೀಲ, ನಿಂಗನಗೌಡ ಗುಂಡಕನಾಳ, ವಿಶ್ವನಾಥ ಸಿಂದಗಿ, ರವಿಕುಮಾರ ಗುಮಶೆಟ್ಟಿ, ಆರ್ ವ್ಹಿ ಕುಲಕರ್ಣಿ, ಐ ಎಂ ಝುಳಕಿ ಸೇರಿದಂತೆ ಕಾಲೇಜಿನ ವಿಧ್ಯಾರ್ಥಿಗಳು ಹಾಗೂ ಭೋದಕ,ಭೋದಕೇತರ ಸಿಬ್ಬಂದ್ದಿ ಹಾಜ-ರಿದ್ದರು.

# ಕಿರಾಣಿ ಅಂಗಡಿಯಲ್ಲಿ ಮದ್ಯ ಮಾರಾಟ :ಪ್ರಕರಣ ದಾಖಲು

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಪರವಾನಗಿ ಇಲ್ಲದೇ ಅನಧಿಕೃತ ಮದ್ಯ ಮಾರಾಟಮಾಡುತ್ತಿದ್ದ ಕಿರಾಣಿ ಅಂಗಡಿಯ ಮೇಲೆ ದಾಳಿ ನಡೆಸಿದ ಪಿಎಸ್‌ಐ ಸಂಜಯ ತಿಪರೆಡ್ಡಿ ಪ್ರಕರಣ ದಾಖಲಿಸಿ ಬಿಸಿ ಮುಟ್ಟಿಸಿದ್ದಲ್ಲದೇ, ಅನಧಿಕೃತ ಮದ್ಯ ಮಾರಾಟ ಮಾಡುವವರಿಗೆ ಎಚ್ಚರಿಕೆಯ ಸಂದೇಶ ರವಾನಿಸಿದ್ದಾರೆ. ತಾಲೂಕಿನ ಕುಂಟೋಜಿ ಗ್ರಾಮದ ಸಂಗಮೇಶ ಕೋಳೂರ ಈತನ ಮೇಲೆ ದಾಳಿ ನಡೆಸಿದ್ದು, 90 ಪೆಟ್ ನ ಒಟ್ಟು 36 ವಿವಿಧ ಬ್ರ್ಯಾಂಡ್ ವಿಸ್ಕಿ ಪೌಚ್‌ಗಳು, 180ಎಂ.ಎಲ್ ನ 2 ಬಿಪಿ ವಿಸ್ಕಿ ಪ್ಯಾಕೆಟ್ ಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ.

# ಬಸವ ಜಯಂತಿಯಂದು ಮಾಂಸ-ಮದ್ಯ ಮಾರಾಟ ನಿಷೇಧಿಸಿ : ಉಮೇಶ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ:ಸೋಮವಾರದಂದು ಬಸವ ಜಯಂತಿ ಹಾಗೂ ಅಕ್ಷಯ ತೃತೀಯ ಪ್ರಯುಕ್ತ ಜಿಲ್ಲೆಯಾದ್ಯಂತ ಮಾಂಸ ಮತ್ತು ಮದ್ಯ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸುವಂತೆ ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷ ಹಾಗೂ ಬಿಜೆಪಿ ಮುಖಂಡ ಉಮೇಶ ಕೋಳಕೂರ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಇದೇ ದಿ. 20 ರಂದು ವಿಶ್ವಗುರು ಬಸವಣ್ಣನವರ ಜನ್ಮದಿನವಾದ 'ಬಸವ ಜಯಂತಿ' ಹಾಗೂ ಅತ್ಯಂತ ಪವಿತ್ರವಾದ 'ಅಕ್ಷಯ ತೃತೀಯ' ಹಬ್ಬಗಳು ಒಟ್ಟಾಗಿ ಆಚರಿಸಲ್ಪಡುತ್ತಿವೆ. ಈ ದಿನಗಳು ನಮ್ಮ ನಾಡಿನ ಸಾಂಸ್ಕೃತಿಕ ಮತ್ತು ಧಾರ್ಮಿಕ ಇತಿಹಾಸದಲ್ಲಿ ಅತ್ಯಂತ ಮಹತ್ವದ ದಿನಗಳಾಗಿವೆ.

ವಿಶ್ವಗುರು ಬಸವಣ್ಣನವರು ದಯವೇ ಧರ್ಮದ ಮೂಲವಯ್ಯಾ...ಎಂದು ಸಾರಿದವರು. ಅಹಿಂಸೆ ಮತ್ತು ಜೀವಕಾರುಣ್ಯ ಅವರ ತತ್ವಗಳ ಮೂಲಾಧಾರ. ಅಂತಹ ಮಹಾಪುರುಷರ ಜಯಂತಿಯ ದಿನದಂದು ಜಿಲ್ಲೆಯಾದ್ಯಂತ ಮಾಂಸದ ಅಂಗಡಿಗಳು ತೆರೆದಿರುವುದು ಮತ್ತು ಪ್ರಾಣಿ ವಧೆ ಮಾಡುವುದು ಅವರ ತತ್ವಗಳಿಗೆ ಹಾಗೂ ಭಕ್ತರ ಭಾವನೆಗಳಿಗೆ ತೀವ್ರ ಧಕ್ಕೆ ತರುತ್ತದೆ. ಅದೇ ರೀತಿ, ಅಕ್ಷಯ ತೃತೀಯದಂತಹ ಮಂಗಳಕರ ದಿನದಂದು ಮದ್ಯದಂತಹ ವಸ್ತುಗಳ ಮಾರಾಟವು ಹಬ್ಬದ ಪಾವಿತ್ರತೆಯನ್ನು ಕೆಡಿಸುತ್ತದೆ ಎಂದು ಕೋಳಕೂರ ಹೇಳಿದ್ದಾರೆ.

ದಿ. 20 ರಂದು ವಿಜಯಪುರ ಜಿಲ್ಲೆಯಾದ್ಯಂತ ಲಕ್ಷಾಂತರ ಭಕ್ತರು ಧಾರ್ಮಿಕ ಕಾರ್ಯಕ್ರಮಗಳಲ್ಲಿ, ಅನ್ನದಾಸೋಹ ಹಾಗೂ ಮೆರವಣಿಗೆಗಳಲ್ಲಿ ಪಾಲ್ಗೊಳ್ಳುತ್ತಾರೆ. ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಹಾಗೂ ಜನರ ಧಾರ್ಮಿಕ ಭಾವನೆಗಳನ್ನು ಗೌರವಿಸುವ ಸಲುವಾಗಿ ಈ ಕಠಿಣ ಕ್ರಮ ಅನಿವಾರ್ಯವಾಗಿದ್ದು, ಜಿಲ್ಲಾಡಳಿತ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಬಸವ ಜಯಂತಿಯಂದು ವಿಜಯಪುರ ಜಿಲ್ಲೆಯಾದ್ಯಂತ ಮಾಂಸ ಮಾರಾಟ (ಕಸಾಯಿಖಾನೆ ಸೇರಿದಂತೆ) ಹಾಗೂ ಮದ್ಯ ಮಾರಾಟವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ಈ ಕೂಡಲೇ ಕಟ್ಟುನಿಟ್ಟಿನ ಆದೇಶ ಹೊರಡಿಸಬೇಕೆಂದು ಈ ಮೂಲಕ ಕೋರಿದ್ದಾರೆ.

# ಶ್ರೀ ಬಿ.ಎಂ.ಪಾಟೀಲ ಪಬ್ಲಿಕ್ ಶಾಲೆ ಶೇ.100 ಪಲಿತಾಂಶ





■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಿಬಿಎಸ್‌ಇ 10ನೇ ತರಗತಿಯ ಫಲಿತಾಂಶ ಪ್ರಕಟವಾಗಿದ್ದು, ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಬಿ. ಎಂ. ಪಾಟೀಲ ಪಬ್ಲಿಕ್ ಶಾಲೆಯು ಶೇ. 100 ರಷ್ಟು ಪಲಿತಾಂಶ ದಾಖಲಿಸಿದೆ.

ಶಾಲೆಯ ವಿದ್ಯಾರ್ಥಿನಿ ಅನುಪ್ರಿಯಾ ರಾಘವೇಂದ್ರ ಕುಲಕರ್ಣಿ ಶೇ. 97.80 ಅಂಕ ಗಳಿಸಿ ಶಾಲೆಗೆ ಪ್ರಥಮ ಸ್ಥಾನ ಗಳಿಸಿದರೆ, ಸಾನ್ವಿ ಬಸವರಾಜ ಎಲಿಗಾರ ಶೇ. 97.20 ಅಂಕ ಗಳಿಸಿ ಶಾಲೆಗೆ ದ್ವಿತೀಯ ಸ್ಥಾನ ಹಾಗೂ ನೇಹಾ ಗಿರೀಶ ಪಾಟೀಲ ಶೇ. 95.40 ಅಂಕ ಗಳಿಸಿ ತೃತೀಯ ಸ್ಥಾನ ಪಡೆದಿದ್ದಾಳೆ.

ಪರೀಕ್ಷೆಗೆ ಹಾಜರಾದ 94 ವಿದ್ಯಾರ್ಥಿಗಳಲ್ಲಿ ಎಲ್ಲರೂ ಪಾಸಾಗಿದ್ದು, ಶೇ. 75 ರಷ್ಟು ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ನಲ್ಲಿ ಪಾಸಾಗಿದ್ದಾರೆ. 21 ವಿದ್ಯಾರ್ಥಿಗಳು ಶೇ. 60 ರಿಂದ ಶೇ. 70 ರಷ್ಟು ಅಂಕ ಗಳಿಸಿದ್ದು, ಮೂರು ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

ಶಾಲೆಯ ಸಾಧನೆಗೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಎಂ ಬಿ ಪಾಟೀಲ, ಪ್ರಧಾನ ಕಾರ್ಯದರ್ಶಿ ಸುನೀಲಗೌಡ ಪಾಟೀಲ ಸಂತಸ ವ್ಯಕ್ತಪಡಿಸಿದ್ದು, ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ್ಕೆ ಶುಭ ಹಾರೈಸಿದ್ದಾರೆ.

ಅದೇ ರೀತಿ ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಪ್ರಾಚಾರ್ಯ ಡಾ. ಶೈಜೂ ಕೆ. ನಾಯರ, ಹಿರಿಯ ಕಾರ್ಯಸಂಯೋಜಕಿ ದೀಪಾ ಜಂಬೂರೆ, ಶಾಲಾ ಬೋಧಕ ಹಾಗೂ ಬೋಧಕರ ಹೊರತಾದ ಸಿಬ್ಬಂದಿ ಅಭಿನಂದಿಸಿದ್ದಾರೆ.

# ಏ.20 ರಿಂದ ಬಿ.ಎಲ್.ಡಿ.ಇ ಆಯುರ್ವೇದ ಆಸ್ಪತ್ರೆಯಲ್ಲಿ ಉಚಿತ ತಪಾಸಣೆ & ಚಿಕಿತ್ಸಾ ಶಿಬಿರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದದಲ್ಲಿ ಅಧಿಕ ರಕ್ತದೊತ್ತಡ (ಊರು ಛಟಠಜ ಔಡಿಇಘಡಿಜ) ತಲೆನೋವು, ತಲೆ ತಿರುಗುವಿಕೆ, ಹೃದಯವು ವೇಗವಾಗಿ ಬಡಿದುಕೊಳ್ಳುವ ಕುರಿತು ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ ಏಪ್ರಿಲ್ 20 ರಿಂದ ಏಪ್ರಿಲ್ 25ರ ವರೆಗೆ ನಡೆಯಲಿದೆ.

ಬಿ.ಎಲ್.ಡಿ.ಇ ಆಯುರ್ವೇದ ಆಸ್ಪತ್ರೆಯಲ್ಲಿ ಕಾಯಚಿಕಿತ್ಸೆ ವಿಭಾಗದ ವತಿಯಿಂದ ಆರು ದಿನಗಳ ಕಾಲ ಆಯೋಜಿಸಲಾಗಿರುವ ಈ ಶಿಬಿರದಲ್ಲಿ ಮೇಲಿನ ಸಮಸ್ಯೆಗಳನ್ನು ಎದುರಿಸುತ್ತಿರುವ 18 ರಿಂದ 79 ವರ್ಷದವರೆಗಿನ ಸಾರ್ವಜನಿಕರು ಚಿಕಿತ್ಸೆ ಪಡೆಯಬಹುದಾಗಿದೆ ಎಂದು ಎಂದು ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಸಂಜಯ ಕಡ್ಲಿಮಟ್ಟಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ-9513397413 ಸಂಪರ್ಕಿಸಬಹುದಾಗಿದೆ.

# ಮೊಬೈಲ್ ಅಬ್ಬರದ ನಡುವೆ ಮಕ್ಕಳಿಗೆ ಯೋಗ-ಧ್ಯಾನವೇ ಪರಿಹಾರ :ಚೌದರಿ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಇಂದಿನ ದಿನಮಾನಗಳಲ್ಲಿ ಮೊಬೈಲ್ ಅಬ್ಬರದ ನಡುವೆ ಮಕ್ಕಳಿಗೆ ಯೋಗ, ಧ್ಯಾನವೇ ಪರಿಹಾರ ಎಂದು ನಿವೃತ್ತ ಮುಖ್ಯಗುರು ಡಿ.ಎಂ.ಚೌದರಿ ಹೇಳಿದರು.

ಪಟ್ಟಣದ ಗುರು ಖಾಸ್ಗತೇಶ್ವರ ಮಿಡ್‌ಬ್ರೇನ್ ಯೋಗ ಮತ್ತು ಧ್ಯಾನ ತರಬೇತಿ ಕೇಂದ್ರದ ವತಿಯಿಂದ, ಶಾಲಾ ಆವರಣದಲ್ಲಿ, ವಿದ್ಯಾರ್ಥಿಗಳಿಗೆ ಕಿಟ್ ವಿತ-ರಿಸುವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಈಗಿನ ಪರಿಸರದಲ್ಲಿ ಮಕ್ಕಳು ಮೊಬೈಲ್, ಕಂಪ್ಯೂಟರ್ ಗಳ ಹಿಂದೆ ಬಿದ್ದು ತಮ್ಮ ನೆನಪಿನ ಶಕ್ತಿಯನ್ನು ಕಳೆದುಕೊಳ್ಳುತ್ತಿದ್ದಾರೆ. ಪಾಲಕರು ಎಷ್ಟೇ ಹತೋಟಿಗೆ ತರಬೇಕೆಂದರೂ ಸಾಧ್ಯವಾಗುತ್ತಿಲ್ಲ. ಇಂತವರಿಗೆ ಗುರು ಖಾಸ್ಗತೇಶ್ವರ ಮಿಡ್‌ಬ್ರೇನ್ ಯೋಗಾ ಶಾಲೆ ಮಕ್ಕಳಿಗೆ ಯೋಗ ಮತ್ತು ಧ್ಯಾನದ ತರಬೇತಿ ನೀಡುವ ಮೂಲಕ ಮಕ್ಕಳ ಮೂರನೇ ಕಣ್ಣನ್ನು ತೆರೆಸಿ ಅವರ ನೆನಪಿನ ಶಕ್ತಿಯನ್ನು ಹೆಚ್ಚಿಸುವಲ್ಲಿ ಶ್ರಮಿಸುತ್ತಿದ್ದಾರೆ. ಈ ವಿದ್ಯೆ ಪಡೆದ ಮಕ್ಕಳು ಶೈಕ್ಷಣಿಕವಾಗಿ ಸಾಕಷ್ಟು ಪ್ರಗತಿ ಹೊಂದುವ ವಿಶ್ವಾಸ ನನಗಿದೆ. ಅಂತಹ ಶಕ್ತಿ ಯೋಗ ಮತ್ತು ಧ್ಯಾನಕ್ಕಿದೆ ಎಂದರು.

ಅತಿಥಿಯಾಗಿದ್ದ ಪ್ರೊ.ಪ್ರಕಾಶ ನರಗುಂದ ಮಾತನಾಡಿ, ನಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸುವದರ ಜೊತೆಗೆ ದೈಹಿಕವಾಗಿ, ಮಾನಸಿಕವಾಗಿ ಸದೃಢರನ್ನಾಗಿಸುವ ಜವಾಬ್ದಾರಿ ನಮ್ಮ ಮೇಲಿದೆ. ಮನೆಯಲ್ಲಿ ಎಷ್ಟೇ ಕಲಿಸುತ್ತೇವೆ ಎಂದರೂ ಅವರ ಮೆದುಳನ್ನು ಚುರುಕುಗೊಳಿಸುವ ಪೂರ್ಣ ಕಾರ್ಯ ನಮ್ಮಿಂದ ಮಾಡಲು ಸಾಧ್ಯವಾಗುವದಿಲ್ಲ. ನಮ್ಮ ಮಕ್ಕಳ ಮೆದುಳನ್ನು ಚುರುಕುಗೊಳಿಸುವ ವಿದ್ಯೆ ಅತೀ ಸುಲಭವಾಗಿ ನಮ್ಮೂರಲ್ಲೇ ಸಿಗುತ್ತಿದೆ ಎಂದರೆ ನಾವು ಪುಣ್ಯವಂತರು. ಪ್ರತಿಯೊಬ್ಬ ಪಾಲಕರು ಈ ಅವಕಾಶವನ್ನು ಸದುಪಯೋಗ ಪಡೆಸಿಕೊಳ್ಳುವಂತೆ ಕರೆ ನೀಡಿದರು.

ನಿವೃತ್ತ ಕಂಟ್ರೋಲರ್ ಎಂ.ಎಸ್.ಪೊಲೇಶಿ ಮುಖ್ಯ ಅತಿಥಿಯಾಗಿ ಮಾತನಾಡಿದರೆ, ಪಾಲಕರ ಪರವಾಗಿ ದೀಪಾ ಕುಲಕರ್ಣಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಶಾಲಾಮಕ್ಕಳಿಗೆ ಯೋಗದ ಕಿಟ್ ವಿತರಿಸಲಾಯಿತು. ಪಾಲಕರೆಲ್ಲರೂ ಸೇರಿ ತರಬೇತಿ ಕೇಂದ್ರದ ಮುಖ್ಯಸ್ಥ, ನಿವೃತ್ತ ಶಿಕ್ಷಕ ಎ.ಆರ್.ಮುಲ್ಲಾ ಅವರಿಗೆ ಸನ್ಮಾನಿಸಿ ಗೌರವಿಸಿದರು. ತರಬೇತಿ ಪಡೆದ ನುರಿತ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಪಾಲಕರಾದ ದಾನಮ್ಮ ಶಿವಶಿಂಪಿ, ಸಿ.ಎಂ.ಹಿರೇಮಠ, ಶಾಂತಾ ಧವಳೇಶ್ವರ, ಎಂ.ಎ.ಹೊನವಾಡ, ಬಿ.ಆರ್.ರಕ್ಕಸಗಿ ಸೇರಿದಂತೆ ಹಲವರು ಇದ್ದರು. ವೈದ್ಯ ರಾಮನಗೌಡ ಪಾಟೀಲ ಪ್ರಸ್ತಾವಿಕವಾಗಿ ಮಾತನಾಡಿದರು. ಶರಣಮ್ಮ ಪಾಟೀಲ ನಿರ್ವಹಿಸಿದರು.

# ರಸ್ತೆ, ಹೈಟೆಕ್ ವೃತ್ತ ನಿರ್ಮಾಣಕ್ಕೆ ಶಾಸಕ ಚಿಕ್ಕಮಾದು ಭೂಮಿಪೂಜೆ

■ ಉದಯರಶ್ಮಿ ದಿನಪತ್ರಿಕೆ



ಹೆಚ್ ಡಿ ಕೋಟೆ: ತಾಲೂಕಿನ ಹ್ಯಾಂಡ್ ಪೋಸ್ಟ್ ಸರ್ಕಲ್ ನಿಂದ ಕೃಷ್ಣಪುರ ಸರ್ಕಲ್ ವರೆಗೆ ಅಂದಾಜು 3ವರೆ ಕೋಟಿ ವೆಚ್ಚದಲ್ಲಿ ರಸ್ತೆ ಕಾಮಗಾರಿ ಹಾಗೂ 3.5 ಕೋಟಿ ವೆಚ್ಚದಲ್ಲಿ ಹ್ಯಾಂಡ್ ಪೋಸ್ಟ್ ವೃತ್ತ ಮತ್ತು ಕೊಲ್ಲೇಗೌಡನಹಳ್ಳಿ ವೃತ್ತ ಕಾಮಗಾರಿ ಗುರುವಾರದಿಂದ ಆರಂಭವಾಗಲಿದ್ದು, 6 ತಿಂಗಳೊಳಗೆ ಕಾಮಗಾರಿ ಪೂರ್ಣಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ಶಾಸಕ ಅನಿಲ್ ಚಿಕ್ಕಮಾದು ಹೇಳಿದರು.

ತಾಲೂಕಿನ ಹ್ಯಾಂಡ್ ಪೋಸ್ಟ್ ಸರ್ಕಲ್ ನಲ್ಲಿ ಒಟ್ಟು 7.5 ಕೋಟಿ ವೆಚ್ಚದ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಶಾಸಕರಾದವರು ಕ್ಷೇತ್ರದ ಅಭಿವೃದ್ಧಿ ಕಾಮಗಾರಿ ಬಗ್ಗೆ ಕನಸು ಕಾಣಬೇಕಂತೆ. ಕ್ಷೇತ್ರದಲ್ಲಿ ರಸ್ತೆ ಹಾಗೂ ಸರ್ಕಲ್ ನಿರ್ಮಾಣ ನನ್ನ ಕನಸು ಕೂಡ ಹೌದು. ದಾವಣಗೆರೆ, ಮೈಸೂರು ಮತ್ತು ಧರ್ಮಸ್ಥಳ ಸೇರಿದಂತೆ ನಾಲ್ಕಾರು ಕಡೆ ಸರ್ಕಲ್ ನೋಡಿದ ಬಳಿಕ ನಮ್ಮ ಕ್ಷೇತ್ರದಲ್ಲೂ ಅದೇ ರೀತಿಯಲ್ಲಿ ಆರ್ ಪಿ ಸರ್ಕಲ್ ನಿರ್ಮಾಣ ಮಾಡಬೇಕೆಂಬ ಆಸೆಯಿತ್ತು. ಹೀಗಾಗಿ ಇಷ್ಟಪಟ್ಟು ರಸ್ತೆ ಹಾಗೂ ಎರಡು ಕಡೆ ಹೈಟೆಕ್ ವೃತ್ತ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿದ್ದೇನೆ. ತಾಲೂಕಿನ ಹೃದಯ ಭಾಗವಾಗಿರುವ, ಹ್ಯಾಂಡ್ ಪೋಸ್ಟ್ ಸರ್ಕಲ್ ಹೈಟೆಕ್ ಮಾದರಿಯಲ್ಲಿ ನಿರ್ಮಾಣವಾಗಲಿದ್ದು, ಸುಮಾರು 50 ಮಂದಿ ಪ್ರಯಾಣಿಕರು ಕುಳಿತುಕೊಳ್ಳಲು ಸಾಮರ್ಥ್ಯವಿರುವ ಬಸ್ ನಿಲ್ದಾಣವನ್ನು ನಾಲ್ಕು ಕಡೆ ನಿರ್ಮಾಣ ಮಾಡಲಾಗುವುದು ಜೊತೆಗೆ ಕುಡಿಯುವ ನೀರು ಹಾಗೂ ಹೈಟೆಕ್ ಟಾಯ್ಲೆಟ್ ನಿರ್ಮಾಣ ಮಾಡಲಾಗುವುದು ಎಂದು ಅನಿಲ್ ಚಿಕ್ಕಮಾದು ಹೇಳಿದರು. ಹೆಚ್ ಡಿ ಕೋಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಏಜಾಜ್ ಪಾಷಾ, ಪುರಸಭೆ ಮಾಜಿ ಸದಸ್ಯ ಹೆಚ್ ಸಿ ನರಸಿಂಹಮೂರ್ತಿ, ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಸೌಮ್ಯ ಮಂಜುನಾಥ್, ಯೂತ್ ಕಾಂಗ್ರೆಸ್ ಅಧ್ಯಕ್ಷ ಅಜರುದ್ದೀನ್, ತಾಲೂಕು ಕಾಂಗ್ರೆಸ್ ವಕ್ತಾರ ಸಾಮ್ರಾಟ್ ಅಶೋಕ್, ಹೋಂಡಾ ನಯಾಜ್, ಪ್ರದೀಪ್ ಕುಮಾರ್, ನೆನಪು ರವಿ, ಪ್ರೇಮ್ ಸಾಗರ್, ಕವಿತಾ ಸುರೇಶ್, ಸೂರ್ಯ ಕುಮಾರ್ ಗೌಡ, ಮಂಜುನಾಥ್ ಹೈರಿಗೆ, ರಾಜು ವಿಶ್ವಕರ್ಮ, ಸ್ಟುಡಿಯೋ ಪ್ರಕಾಶ್, ಪುರಸಭೆ ಮುಖ್ಯಾಧಿಕಾರಿ ಸುರೇಶ್, ಎಇಇ.ರಮೇಶ್, ಸಿದ್ದರಾಮು, ಕಬಿನಿ ಹೇಮಂತ್, ಶಿವಪ್ಪ ಕೋಟೆ ಆಸೀಫ್ ಇಕ್ಬಾಲ್, ಡಾ. ಮರಿದೇವಯ್ಯ, ವಡ್ಡರಗುಡಿ ರವಿ, ಚಿಕ್ಕಣ್ಣ, ಕಾರ್ತಿಕ್, ಶಶಿ ಪಟೇಲ್, ವನಸಿರಿ ಉಮೇಶ್, ಶಿವಮಲ್ಲಪ್ಪ ಸೇರಿದಂತೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಯರಹಳ್ಳಿ ಗ್ರಾಮಸ್ಥರು ಉಪಸ್ಥಿತರಿದ್ದರು.

## ಎಲ್ಲೆಲ್ಲಿ ಸರ್ಕಲ್, ಬಸ್ ನಿಲ್ದಾಣ ನಿರ್ಮಾಣ?

**ಹ್ಯಾಂಡ್ ಪೋಸ್ಟ್ ಸರ್ಕಲ್ ನಲ್ಲಿ ಹೈಟೆಕ್ ಮಾದರಿಯಲ್ಲಿ ವೃತ್ತ ಕೊಲ್ಲೇಗೌಡನಹಳ್ಳಿ ಬಳಿ ವೃತ್ತ ಮತ್ತು ಕಾವೇರಿ ಪ್ರತಿಮೆ ಸರ್ಕಲ್ ನ ನಾಲ್ಕು ಭಾಗಗಳಲ್ಲೂ ಹೈಟೆಕ್ ಬಸ್ ನಿಲ್ದಾಣ ಕುಡಿಯುವ ನೀರು ಮತ್ತು ಹೈಟೆಕ್ ಟಾಯ್ಲೆಟ್ ನಿರ್ಮಾಣ ಹ್ಯಾಂಡ್ ಪೋಸ್ಟ್ ಸರ್ಕಲ್ ನಿಂದ ಕೃಷ್ಣಪುರ ಸರ್ಕಲ್ ವರೆಗೆ ರಸ್ತೆ ಧರ್ಮಸ್ಥಳ-ಉಜಿರೆ ರಸ್ತೆ ಮಾದರಿಯಲ್ಲಿ ರಸ್ತೆ ನಿರ್ಮಾಣ**

# ಕೃತಕ ಬುದ್ಧಿಮತ್ತೆ ತಂತ್ರಜ್ಞಾನದಲ್ಲಿ ಭಾರತ 3ನೇ ಸ್ಥಾನ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಇಂದು ಕೃತಕ ಬುದ್ಧಿಮತ್ತೆ (ಎ.ಐ) ಇಡೀ ಜಗತ್ತಿನ ಎಲ್ಲ ಕ್ಷೇತ್ರಗಳನ್ನು ಆವರಿಸಿದ್ದು, ತಾಂತ್ರಿಕ ಜಗತ್ತು ಬಹಳಷ್ಟು ಬದಲಾವಣೆಗೆ ಒಡ್ಡಿಕೊಳ್ಳುತ್ತಿದೆ. ಆರೋಗ್ಯ ಸೇವೆಯಿಂದ ಹಿಡಿದು ಹಣಕಾಸು ವಲಯದವರೆಗೆ ತನ್ನ ಪ್ರಭಾವವನ್ನು ಬೀರುತ್ತಿದ್ದು, ಉದ್ಯೋಗಾಕಾಂಕ್ಷಿಗಳು ವಿನೂತನವಾದ ಕೌಶಲ್ಯಗಳನ್ನು ಹೊಂದಬೇಕಾಗಿರುವದು ಇಂದಿನ ಅಗತ್ಯತೆಯಾಗಿದೆ. ಸ್ಪರ್ಧಾತ್ಮಕತೆಯೊಂದಿಗೆ ಹೊಂದಿಕೊಳ್ಳಲು ತಾಂತ್ರಿಕ ವೃತ್ತಪರರು ವಿಶೇಷವಾಗಿ ಮಷಿನ್ ಲರ್ನಿಂಗ್, ಎ.ಐ.ಕಾನ್ಸೆಪ್ಟ್, ಕ್ಲೌಡ್ ಕಂಪ್ಯೂಟಿಂಗ್, ಸೈಬರ್ ಸೆಕ್ಯುರಿಟಿನಂತಹ ಮಲ್ಟಿಸ್ಕಿಲ್ಕಗಳನ್ನು ಪಡೆದುಕೊಳ್ಳಬೇಕಾಗಿದೆ. ಇತ್ತೀಚಿನ ವರದಿ ಪ್ರಕಾರ, ಕೃತಕ ಬುದ್ಧಿಮತ್ತೆ ತಂತ್ರಜ್ಞಾನದಲ್ಲಿ ಭಾರತ ವಿಶ್ವದ ಮೂರನೇಯ ಶ್ರೇಯಾಂಕ ಪಡೆದಿದೆ ಎಂದು ವಿಜಯಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರೊ. ಎಂ.ಎಸ್.ಖೊದ್ನಾಪೂರ ಅವರು ಅಭಿಪ್ರಾಯಪಟ್ಟರು.

ಅವರು ಮಹಾರಾಷ್ಟದ ಪುಣೆ ಜಿಲ್ಲೆಯ ಬಾರಾಮತಿಯ ಸಂಗಮೇಶ್ವರನಗರದ ಎಂ.ಕೆ.ಎಸ್. ಕಾಲೇಜಿನಲ್ಲಿ ನಡೆದ ರಾಷ್ಟ್ರೀಯ ವಿಚಾರಸಂಕೀರಣದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಮಾತನಾಡುತ್ತಿದ್ದರು.

ಅವರು ಮಾತನಾಡುತ್ತಾ, ಕಾರ್ಪೋರೇಟ್ ಜಗತ್ತಿನಲ್ಲಿ ಉದ್ಯೋಗಿಗಳು ತಮ್ಮ ಸ್ವಂತ ಭಾವನೆಗಳನ್ನು ಅರ್ಥೈಸಿಕೊಂಡು ಇತರ ಸಹದ್ಯೋಗಿಗಳ ಶಕ್ತಿ-ಸಾಮರ್ಥ್ಯ ಗುರುತಿಸಿ, ಒತ್ತಡ ನಿವಾರಣೆ, ಪರಿಣಾಮಕಾರಿ ಸಂವಹನ, ಸಹಾನುಭೂತಿ ಮತ್ತು ಸವಾಲುಗಳನ್ನು ನಿಭಾಯಿಸಲು ಭಾವನಾತ್ಮಕ ಬುದ್ಧಿಮತ್ತೆ ಪ್ರಮುಖ ಪಾತ್ರವಹಿಸುತ್ತದೆ. ಕಂಪನಿಯಲ್ಲಿ ಸಹದ್ಯೋಗಿಗಳ ಸಮಸ್ಯೆಗಳು, ಭಾವನೆಗಳು, ಮಾನಸಿಕ ಆಲೋಚನೆ, ಚಿಂತನೆ, ಕೆಲಸದ ಸಂತೃಪ್ತಿ, ಗುಣಮಟ್ಟದ ಕಾರ್ಯನಿರ್ವಹಣೆಗೆ ಉತ್ತಮ ಪರಿಸರವನ್ನು ನಿರ್ಮಿಸುವುದರ ಮೂಲಕ ಭಾವನಾತ್ಮಕ ಸಂಬಂಧವನ್ನು ಹೊಂದಬೇಕು. ಇಂದಿನ ಆಧುನಿಕ ಜಗತ್ತಿನಲ್ಲಿ ವಿಷಯ ಬುದ್ಧಿಮತ್ತೆಗಿಂತಲೂ ಭಾವನಾತ್ಮಕ ಬುದ್ಧಿಮತ್ತೆಯು ಹೆಚ್ಚಿನ ಮಹತ್ವ ಪಡೆದುಕೊಳ್ಳುತ್ತಿದೆ. ಭಾರತದ ವೇಗವಾಗಿ ಬೆಳೆಯುತ್ತಿರುವ ಕಾರ್ಪೋರೇಟ್ ಕ್ಷೇತ್ರದಲ್ಲಿ ಕೇವಲ ತಾಂತ್ರಿಕ ಕೌಶಲ್ಯಗಳು ಸಾಲದು ಎಂದರು.

ವಿಚಾರ ಸಂಕೀರಣದ ಉದ್ಘಾಟನೆಯನ್ನು ಪುಣೆ ವಿಶ್ವವಿದ್ಯಾಲಯದ ಕುಲಪತಿ ಡಾ. ಪರಾಗ ಕಾಳ್ಕರ ಅವರು ನೆರವೇರಿಸಿದರು. ಸಂಸ್ಥೆಯ ಅಧ್ಯಕ್ಷ ಸತೀಶರಾವ್ ಕಾಕಡೆ, ಫರಗಷನ್ ಕಾಲೇಜಿನ ಡ. ಶ್ಯಾಮ್ ಮುಡೆ, ಎರಡನೇಯ ಗೋಷ್ಠಿಯ ಸಂಪನ್ಮೂಲ ವ್ಯಕ್ತಿ ಡಾ. ವಿರೇಂದ್ರಕುಮಾರ ನರಸಲಗಿ, ಕಾಲೇಜಿನ ಪ್ರಾಂಶುಪಾಲ ಡಾ. ದೇವಿದಾಸ್ ವಾಯದಂಡೆ, ಡಾ, ಸಂಜು ಜಾಧವ, ರಾಹುಲ ಖರಾತ ಇನ್ನಿತರರು ಸಹ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಈ ರಾಷ್ಟ್ರೀಯ ವಿಚಾರಸಂಕೀರಣದಲ್ಲಿ ದೇಶದ ವಿವಿಧ ರಾಜ್ಯಗಳಿಂದ ಸುಮಾರು 300 ಕ್ಕೂ ಹೆಚ್ಚು ಪ್ರಾಧ್ಯಾಪಕರು ಹಾಗೂ ಸಂಶೋಧನಾರ್ಥಿಗಳು ಭಾಗವಹಿಸಿದ್ದರು.

# ಆಯುಥಿರ್ಂಕ್ ಫೆಸ್ಟ-2026 ತರ್ಕ ಸಂಗ್ರಹಣೆ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಮಹಾವಿದ್ಯಾಲಯ ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದ ಇ.ಡಿ ಸೆಲ್(ಇಆ ಅಜಟಟ) ವತಿಯಿಂದ, ಆಯುರ್ವೇದ ವೈದ್ಯಕೀಯ ಪದ್ಧತಿಯ ತತ್ವಗಳನ್ನು ನವೀಕರಿಸುವ ಹೊಸ ತರ್ಕ ಮಂಡನೆಯ ಕುರಿತು ವಿದ್ಯಾರ್ಥಿಗಳಿಗೆ ಆಯುಥಿರ್ಂಕ್ ಫೆಸ್ಟ-2026 ವಿಷಯ ಕುರಿತು ತರ್ಕ ಸಂಗ್ರಹಣೆ ಕಾರ್ಯಕ್ರಮ ಶನಿವಾರ ನಡೆಯಿತು.

ಈ ಕಾರ್ಯಕ್ರಮವನ್ನು ಉದ್ಘಾಟಿಸಿದ ಕೆ.ಎಲ್.ಇ ಸಂಸ್ಥೆಯ ನಿರ್ದೇಶಕ ಡಾ.ಬಿ.ಶ್ರೀನಿವಾಸ ಪ್ರಸಾದ, ಇಂದಿನ ದಿನಗಳಲ್ಲಿ ಆಯುರ್ವೇದ ಪದ್ಧತಿಯನ್ನು ವೈಜ್ಞಾನಿಕರಣ ಮಾಡುವುದು ಮುಖ್ಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಸಂಶೋಧನ ಕೇಂದ್ರದ ಸಿಬ್ಬಂದಿ ಸಂಯೋಜಕ ಡಾ.ನಿರ್ಮಲಾ, ಕಾಲೇಜಿನ ಪ್ರಾಚಾರ್ಯ ಡಾ. ಅಶೋಕ ಪಾಟೀಲ, ವೈದ್ಯರಾದ ಡಾ.ವಿಜಯಲಕ್ಷ್ಮಿ ಪೂಜಾರಿ, ಡಾ. ಕಾಶೀನಾಥ ಹದಿಮೂರ ಮುಂತಾದವರು ಉಪಸ್ಥಿತರಿದ್ದರು. ಆಯುರ್ವೇದ, ಎಂಜನಿಯರಿಂಗ್ ಹಾಗೂ ಬೇರೆ ಬೇರೆ ಕಾಲೇಜುಗಳಿಂದ ಸುಮಾರು 80 ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಎನ್‌ಎಸ್‌ಎಸ್‌ನಿಂದ ಸಂಪೂರ್ಣ ವ್ಯಕ್ತಿತ್ವ ಬೆಳವಣಿಗೆ: ಇಂದಿರಾ ಶೇಟಕಾರ್

■ ಉದಯರಶ್ಮಿ ದಿನಪತ್ರಿಕೆ



ಕಲಬುರ್ಗಿ: ಎನ್‌ಎಸ್‌ಎಸ್ ಶಿಬಿರದಲ್ಲಿ ಭಾಗವಹಿಸುವಿಕೆಯಿಂದ ವಿದ್ಯಾರ್ಥಿಗಳಲ್ಲಿ ಸಂಪೂರ್ಣ ವ್ಯಕ್ತಿತ್ವ ಬೆಳವಣಿಗೆ ಸಾಧ್ಯವಾಗುತ್ತದೆ ಎಂದು ಶರಣಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದ ಸಿ.ಎ ಫೌಂಡೇಶನ್ ನಿರ್ದೇಶಕಿ ಡಾ. ಇಂದಿರಾ ಶೇಟಕಾರ್ ಅವರು ಹೇಳಿದರು.

ಶರಣಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬುಧವಾರ ಎನ್‌ಎಸ್‌ಎಸ್ ಶಿಬಿರದ ಸಮಾರೋಪದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಶಿಬಿರದ ಮೂಲಕ ವಿದ್ಯಾರ್ಥಿಗಳು ಸಮಾಜದ ಸಮಸ್ಯೆಗಳ ಅರಿವು ಪಡೆದು, ಅವುಗಳಿಗೆ ಪರಿಹಾರ ಕಂಡುಹಿಡಿಯುವ ಮನೋಭಾವವನ್ನು ಬೆಳೆಸಿಕೊಂಡಿದ್ದೀರಿ ಎಂದರು.

ಗ್ರಾಮ ಸ್ವಚ್ಛತೆ, ಆರೋಗ್ಯ ಜಾಗೃತಿ, ಶಿಕ್ಷಣ ಪ್ರಚಾರ, ಪರಿಸರ ಸಂರಕ್ಷಣೆ ಮುಂತಾದ ಕಾರ್ಯಗಳಲ್ಲಿ ನಿಮ್ಮ ತೊಡಗಿಸಿಕೊಳ್ಳುವಿಕೆ ಪ್ರಶಂಸನೀಯವಾಗಿದೆ. ಪುಸ್ತಕ ಜ್ಞಾನ ಮಾತ್ರ ಸಾಕಾಗುವುದಿಲ್ಲ. ಸಮಾಜಜ್ಞಾನವೂ ಅಗತ್ಯ. ಈ ಶಿಬಿರವು ನಿಮಗೆ ನಾಯಕತ್ವ ಗುಣ, ಸಹಕಾರ ಮನೋಭಾವ, ಸಮಯಪಾಲನೆ ಮತ್ತು ಶಿಸ್ತುಗಳನ್ನು ಕಲಿಸಿರುತ್ತದೆ. ಇವುಗಳು ನಿಮ್ಮ ಭವಿಷ್ಯದಲ್ಲಿ ಯಶಸ್ಸಿಗೆ ಬುನಾದಿಯಾಗುತ್ತವೆ ಎಂದು ಅವರು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯ ಪ್ರಾಚಾರ್ಯ ಡಾ. ದಶರಥ ಮೇತ್ರೆ ಅವರು ಮಾತನಾಡಿ, ಶಿಬಿರದಿಂದ ಹಳ್ಳಿ ಜೀವನ, ಅಲ್ಲಿಯ ಸಮಸ್ಯೆಗಳ ಅರಿವಾಗಿರುತ್ತದೆ. ದೇಶದ ಅಭಿವೃದ್ಧಿಗೆ ಯುವಜನರ ಪಾತ್ರ ಅತ್ಯಂತ ಪ್ರಮುಖವಾಗಿದೆ. ನೀವು ಪಡೆದಿರುವ ಈ ಅನುಭವವನ್ನು ನಿಮ್ಮ ಜೀವನದಲ್ಲಿ ಸದಾ ಉಳಿಸಿಕೊಳ್ಳಿ ಮತ್ತು ಸಮಾಜದ ಒಳಿತಿಗಾಗಿ ನಿರಂತರವಾಗಿ ಸೇವೆ ಸಲ್ಲಿಸಿ. ನಿಮ್ಮಲ್ಲಿ ಪ್ರತಿಯೊಬ್ಬರೂ ಒಳ್ಳೆಯ ನಾಗರಿಕರಾಗಬೇಕು ಎಂದರು.

ಮಹಾವಿದ್ಯಾಲಯದ ಎನ್‌ಎಸ್‌ಎಸ್ ಅಧಿಕಾರಿ ಪ್ರೊ. ದಯಾನಂದ್ ಹೊಡಲ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕು. ಮನೋಜಕುಮಾರ್ ಸ್ವಾಗತಿಸಿದರು, ಕು. ರಕ್ಷಿತ್ ಅವರು ಕಾರ್ಯಕ್ರಮ ನಿರೂಪಿಸಿದರು. ಕು. ಹರೀಶ್ ವಂದಿಸಿದರು. ವಿದ್ಯಾರ್ಥಿಗಳು ಶಿಬಿರದ ಅಭಿಪ್ರಾಯ ತಿಳಿಸಿದರು.

# ಬಸವ ಜಯಂತಿ ಉತ್ಸವ: ಪದಾಧಿಕಾರಿಗಳ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ





ಬೀದರ್: ಬುಧವಾರ ನಗರದಲ್ಲಿ ನಡೆದ ಬಸವ ಭಕ್ತರ ಸಭೆಯಲ್ಲಿ ಬಸವ ಜಯಂತಿ ಉತ್ಸವ 2026ರ ಅಂಗವಾಗಿ ವಿವಿಧ ಸಮಿತಿಗಳ ಪದಾಧಿಕಾ-ರಿಗಳನ್ನು ಆಯ್ಕೆ ಮಾಡಲಾಗಿದೆ.

ಮಹಿಳಾ ಸಮಿತಿಯ ಅಧ್ಯಕ್ಷರಾಗಿ ಡಾ. ದೇವಿಕಾ ನಾಗೂರೆ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಜ್ಞಾನದೇವಿ ಬಬಛಡೆ, ಕಾರು ರ‍್ಯಾಲಿ ಸಮಿತಿಯ ಅಧ್ಯಕ್ಷರಾಗಿ ವೀರಶೆಟ್ಟಿ ಖ್ಯಾಮಾ, ಪ್ರಧಾನ ಕಾರ್ಯದರ್ಶಿಯಾಗಿ ಸಂತೋಷ ಪಾಟೀಲ್ ಮತ್ತು ಕಾರ್ಯದರ್ಶಿಯಾಗಿ ಅರುಣ ಹೊತಪೇಟ, ಮೆರವಣಿಗೆ ಸಮಿತಿಯ ಗೌರವಾಧ್ಯಕ್ಷರಾಗಿ ಸುರೇಶ ಸ್ವಾಮಿ, ಅಧ್ಯಕ್ಷರಾಗಿ ಧನರಾಜ ಹಂಗರಗಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ವಿಕ್ರಮ್ ಮುದಾಳೆ, ವೇದಿಕೆ ಸಮಿತಿಯ ಅಧ್ಯಕ್ಷರಾಗಿ ದಾನಿ ಬಾಬುರಾವ್, ಪ್ರಧಾನ ಕಾರ್ಯದರ್ಶಿಯಾಗಿ ವಿರೇಶ ಸ್ವಾಮಿ ಮತ್ತು ಕಾರ್ಯದರ್ಶಿಗಳಾಗಿ ಸಿದ್ಧಾರೂಢ ಭಾಲ್ಕೆ ಹಾಗೂ ಯೋಗೇಶ ಸಿರಿಗೆರೆ ಅವರು ನೇಮಕಗೊಂಡಿದ್ದಾರೆ.

ಪ್ರಚಾರ ಸಮಿತಿಯ ಅಧ್ಯಕ್ಷರಾಗಿ ಆನಂದ ದೇವಪ್ಪ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಶಿವಕುಮಾರ ಸ್ವಾಮಿ, ಪ್ರಸಾದ ಸಮಿತಿಯ ಅಧ್ಯಕ್ಷರಾಗಿ ವಿಶ್ವನಾಥ ಕಾಜಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ರೇವಣಸಿದ್ಧಯ್ಯ ಸ್ವಾಮಿ (ರಾಜು ಸ್ವಾಮಿ), ನಗರ ಅಲಂಕಾರ ಸಮಿತಿಯ ಅಧ್ಯಕ್ಷರಾಗಿ ರಾಜೇಂದ್ರಕುಮಾರ್ ಮಣಿಗೆರೆ, ಪ್ರಧಾನ ಕಾರ್ಯದರ್ಶಿಯಾಗಿ ಹಣಮಂತ ಬುಳ್ಳಾ ಹಾಗೂ ಕಾರ್ಯದರ್ಶಿಗಳಾಗಿ ವರದಯ್ಯ ಸ್ವಾಮಿ ಗಾದಗಿ ಮತ್ತು ಸಂಜುಕುಮಾರ್ ಮೂಲಗೆ, ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷರಾಗಿ ಪ್ರೊ. ಸಂಗ್ರಾಮ ಎಂಗ್ಳೆ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ರೇವಣಪ್ಪ ಮೂಲಗೆ ಅವರು ನೇಮಕಗೊಂಡಿದ್ದಾರೆ.ಗೌರವ ಸಲಹೆಗಾರರಾಗಿ ಶಿವಶರಣಪ್ಪ ವಾಲಿ, ಬಿ.ಜಿ. ಶೆಟಕಾರ್, ಚಂದ್ರಶೇಖರ್ ಪಾಟೀಲ್ ಗಾದಗಿ, ಗುರುನಾಥ ಕೊಳ್ಳೂರ್, ವೈಜಿನಾಥ ಕಮಠಾಣೆ, ಡಾ. ಶೈಲೇಂದ್ರ ಕೆ. ಬೆಲ್ದಾಳೆ, ಬಾಬು ವಾಲಿ, ಶರಣಪ್ಪ ಮಿಠಾರೆ, ಕುಶಾಲರಾವ್ ಪಾಟೀಲ್ ಖಾಜಾಪೂರ, ಬಸವರಾಜ್ ಪಾಟೀಲ್ ಹಾರೂರಗೇರಿ, ರಾಜೇಂದ್ರಕುಮಾರ್ ಗಂದಗೆ, ಸುರೇಶ್ ಚನ್ನಶೆಟ್ಟಿ ಹಾಗೂ ಜೈರಾಜ್ ಖಂಡ್ರೆ, ಸಂಚಾಲಕರಾಗಿ ಡಾ. ಶಿವಶಂಕರ ಟೋಕರೆ ಅವರು ನೇಮಕಗೊಂಡಿದ್ದಾರೆ. ಸಭೆಯಲ್ಲಿ ಉತ್ಸವ ಸಮಿತಿಯ ಅಧ್ಯಕ್ಷ ಡಾ. ರಜನೀಶ್ ವಾಲಿ, ಪ್ರಧಾನ ಕಾರ್ಯದರ್ಶಿಗಳಾದ ಶಶಿ ಹೊಸಳ್ಳಿ ಹಾಗೂ ಕೋಶಾಧ್ಯಕ್ಷ ಸಿದ್ರಾಮಯ್ಯ ಸ್ವಾಮಿ ಅವರು ಉಪಸ್ಥಿತರಿದ್ದು, ಉತ್ಸವದ ವಿವಿಧ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

# ಬೀದರ್ ಜಿಲ್ಲೆಯಲ್ಲಿ ಶ್ರೀ ಸತ್ಯ ಸಾಯಿ ಪ್ರೇಮವಾಹಿನಿ ರಥಯಾತ್ರೆ



■ ಉದಯರಶ್ಮಿ ದಿನಪತ್ರಿಕೆ

ಬೀದರ್: ಇದೇ ಏಪ್ರಿಲ್ 17ರಿಂದ 19ರವರೆಗೆ ಜಿಲ್ಲೆಯಾದ್ಯಂತ ಶ್ರೀ ಸತ್ಯ ಸಾಯಿ ಪ್ರೇಮವಾಹಿನಿ ರಥಯಾತ್ರೆ ಸಂಚರಿಸಲಿದೆ ಎಂದು ಶ್ರೀ ಸತ್ಯ ಸಾಯಿ ಸೇವಾ ಸಂಸ್ಥೆಗಳು ಕರ್ನಾಟಕ ಉತ್ತರ ಜಿಲ್ಲೆಯ ಜಿಲ್ಲಾ ಅಧ್ಯಕ್ಷ ಅಮರನಾಥ ಫುಲೆಕರ್ ಅವರು ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀ ಸತ್ಯ ಸಾಯಿ ಸೇವಾ ಸಂಸ್ಥೆಗಳ ವತಿಯಿಂದ ಈ ಮೂರು ದಿವಸಗಳ ವರೆಗೆ ವಿವಿಧ ಧಾರ್ಮಿಕ ಹಾಗೂ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಏಪ್ರಿಲ್ 17ರಂದು ಮಧ್ಯಾಹ್ನ 1 ಗಂಟೆಗೆ ಕಲಬುರ್ಗಿ ಜಿಲ್ಲೆಯಿಂದ ಆಗಮಿಸುವ ಈ ರಥ-'ಯಾತ್ರೆಗೆ ಗಡಿಯಲ್ಲಿ ಸ್ವಾಗತಿಸಿ ಬರಮಾಡಿಕೊಂಡು, ಹುಮ್ನಾಬಾದ್ ಪಟ್ಟಣದ ಭವಾನಿ ಮಂದಿರದಲ್ಲಿ ಸ್ವಾಗತ ಕಾರ್ಯಕ್ರಮ ಜರುಗಲಿದೆ. ಸಂಜೆ 4 ಗಂಟೆಯಿಂದ 6 ಗಂಟೆಯವರೆಗೆ ಪಟ್ಟಣದ ಅಂಬೇಡ್ಕರ್ ವೃತ್ತ, ಬಸವೇಶ್ವರ ವೃತ್ತದ ಮೂಲಕ ಶ್ರೀ ವೀರಭದ್ರೇಶ್ವರ ದೇವಸ್ಥಾನದ ವರೆಗೆ ರಥ-'ಯಾತ್ರೆಯ ಮೆರವಣಿಗೆ ಜರುಗಲಿದ್ದು, ನಂತರ ಮಹಾ ಮಂಗಳಾರತಿ ನಂತರ ಮಹಾಪ್ರಸಾದ ಕಾರ್ಯಕ್ರಮ ಜರುಗಲಿದೆ ಎಂದರು.

ಹುಮ್ನಾಬಾದ್‌ನಿಂದ ಹೊರಟು ವಾಯಾ ಮನ್ನಾಯಿಖೆಳ್ಳಿ ಮಾರ್ಗವಾಗಿ ರಾತ್ರಿ 8 ಗಂಟೆಗೆ ಬೀದರ್ ತಾಲ್ಲೂಕಿನ ಕಾಡವಾದ ಗ್ರಾಮಕ್ಕೆ ತಲುಪಲಿದೆ. ಅಲ್ಲಿ ಸ್ವಾಗತ ಕಾರ್ಯಕ್ರಮ, ಮಹಾ ಮಂಗಳಾರತಿ ಜರುಗಿ ಅಲ್ಲಿಯೆ ವಾಸ್ತವ್ಯ ಮಾಡಲಿದೆ. ಮರುದಿನ 18ರಂದು ಬೆಳಿಗ್ಗೆ ಕಾಡವಾದನಿಂದ ಹೊರಟು ರಥ-'ಯಾತ್ರೆಯು ಬೆಳಿಗ್ಗೆ 7.30 ಗಂಟೆಗೆ ತಾಲ್ಲೂಕಿನ ಮಂದಕನಳ್ಳಿ ಗ್ರಾಮ ತಲುಪಲಿದೆ. ಅಲ್ಲಿ ಭಕ್ತರ ದರುಶನಕ್ಕಾಗಿ ಇರಲಿದೆ. ಬೆಳಿಗ್ಗೆ 8.30 ಗಂಟೆಗೆ ಅಲ್ಲಿಂದ ಹೊರಟು ಬೆಳಿಗ್ಗೆ 10.30 ಗಂಟೆಗೆ ತಾಲ್ಲೂಕಿನ ಮನ್ನಳ್ಳಿ ಗ್ರಾಮಕ್ಕೆ ತಲುಪಲಿದೆ. ಬೆ.11 ಗಂಟೆವರೆಗೆ ಗ್ರಾಮದಲ್ಲಿ ಮೆರವಣಿಗೆ ಮೂಲಕ ಸಾಗಿ ಬೆಳಿಗ್ಗೆ 11.15 ಗಂಟೆಗೆ ಅಲ್ಲಿಂದ ನಿರ್ಗಮಿಸಿ ಮಧ್ಯಾಹ್ನ 12.15 ಗಂಟೆಗೆ ಚಿಟ್ಟಾ ಗ್ರಾಮಕ್ಕೆ ತಲುಪಲಿದೆ. ಮ. 12.15ರಿಂದ ಮ.2.15 ಗಂಟೆ ವರೆಗೆ ಚಿಟ್ಟಾ ಗ್ರಾಮ ಸಮಿತಿಯಿಂದ ಮೆರವಣಿಗೆ, ಸ್ವಾಗತ ಸಮಾರಂಭ ಜರುಗಲಿದ್ದು, ನಂತರ 3.15ಕ್ಕೆ ಚಿಟ್ಟಾದಿಂದ ಹೊರಟು ನಗರದ ಚಿಟ್ಟಾ ಕ್ರಾಸ್ ಬಳಿ ಸ್ವಾಗತ ಕಾರ್ಯಕ್ರಮ ಜರುಗಲಿದೆ ಎಂದು ಅವರು ಹೇಳಿದರು.ಮಧ್ಯಾಹ್ನ 3.15ರಿಂದ ಸಾಯಂಕಾಲ 4.15ರ ವರೆಗೆ ನಗರದ ಗುಂಪಾದಿಂದ ಚೌಬಾರಾ ಬಳಿ ಇರುವ ಪಾಂಡುರಂಗ ಮಂದಿರ ವರೆಗೆ ಮೆರವಣಿಗೆ ಜರುಗಲಿದೆ. ನಂತರ ಸಂಜೆ 6 ಗಂಟೆಯಿಂದ ರಾತ್ರಿ 8.30 ಗಂಟೆ ವರೆಗೆ ಪಾಂಡುರಂಗ ಮಂದಿರದಿಂದ ನಗರದ ಪ್ರಮುಖ ವೃತ್ತಗಳಾದ ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ಮಡಿವಾಳ ಚೌಕ್, ಕೇಂದ್ರ ಬಸ್ ನಿಲ್ದಾಣದ ಹಿಂದಿರುವ ದೇವಿ ಕಾಲೋನಿಯಲ್ಲಿನ ಶ್ರೀ ಸತ್ಯ ಸಾಯಿ ಸೇವಾ ಕ್ಷೇತ್ರಕ್ಕೆ ತಲುಪಲಿದೆ. ನಂತರ ಮಹಾಮಂಗಳಾರತಿ ತದನಂತರ ಮಹಾಪ್ರಸಾದ ಜರುಗಲಿದೆ ಎಂದವರು ತಿಳಿಸಿದರು.

ಏಪ್ರಿಲ್ 19ರಂದು ಬೆಳಿಗ್ಗೆ 5 ಗಂಟೆಗೆ ಓಂಕಾರಂ, ಸುಪ್ರಭಾತಂ ನಗರ ಸಂಕೀರ್ತನ ಜರುಗಲಿದೆ. 6.30 ಗಂಟೆಗೆ ಪಾದುಕ ಪೂಜೆ, 8 ಗಂಟೆಯಿಂದ 5 ಗಂಟೆ ವರೆಗೆ ಗಂಟೆ ವರೆಗೆ ಅಲ್ಲಿಯ ರಥಯಾತ್ರೆಯ ದಿವ್ಯ ದರ್ಶನಕ್ಕೆ ಇಡಲಾಗುವುದು. ಸಂಜೆ 5.30 ಗಂಟೆಯಿಂದ ರಾತ್ರಿ 8.30 ಗಂಟೆ ವರೆಗೆ ಬಿ.ವಿ ವಿದ್ಯಾರ್ಥಿಗಳಿಂದ ಭಜನೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ. ರಾತ್ರಿ 8.30 ಗಂಟೆಯಿಂದ 9.30 ಗಂಟೆ ವರೆಗೆ ಮಹಾ ಮಂಗಳಾರತಿ ನಂತರ ಮಹಾಪ್ರಸಾದ ಕಾರ್ಯಕ್ರಮ ಜರುಗುವುದು. ಮರುದಿನ ಏ.20ರಂದು ಯಥಾವತ್ತಾಗಿ ಓಂಕಾರ, ಸುಪ್ರಭಾತ, ನಗರ ಸಂಕೀರ್ತನ ಕಾರ್ಯಕ್ರಮ, 6.30 ಗಂಟೆಗೆ ಪಾದುಕ ಪೂಜೆ, ಬೆಳಿಗ್ಗೆ 9.00 ಗಂಟೆಗೆ ಸಂಸ್ಥೆಯ ರಾಜ್ಯಾಧ್ಯಕ್ಷ ಪದ್ಮನಾಭ ಪಾಯಿ ಅವರ ನೇತೃತ್ವದಲ್ಲಿ ಬೀದರ್‌ನಿಂದ ಹೊರಟು ಕೇರಳಕ್ಕೆ ಪ್ರಯಾಣ ಬೆಳೆಸಲಿದೆ ಎಂದವರು ವಿವರಿಸಿದರು.

# ಓದುಗರಿಗೆ ಆಳವಾದ ಅನುಭಾವ ಸೃಷ್ಟಿಸುವ ಕವಿತೆ : ಮನು ಪತ್ತಾರ

## ವಿಜಯಪುರದಲ್ಲಿ "ಬಯಕೆಯ ಬಳ್ಳಿ" ಪುಸ್ತಕ ಲೋಕಾರ್ಪಣೆಗೊಳಿಸಿದ ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ರಾಹುಲ್‌ಕುಮಾರ್ ಭಾವಿದೊಡ್ಡಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸಾಹಿತ್ಯ ಎಂಬುದು ಕೇವಲ ಪದಗಳ ಜೋಡಣೆವಲ್ಲ ಅದು ಮನಸ್ಸಿನ ನಿಜ ಸ್ವರೂಪವನ್ನು ಪ್ರತಿಬಿಂಬಿಸುವ ಕನ್ನಡಿಯಾಗಿದೆ. ಅನುಭವಗಳ ಆಳ ಭಾವಗಳ ವ್ಯಾಪ್ತಿ ಜೀವನಗಳ ಸತ್ಯ ಸೌಂದರ್ಯಗಳ ಸಂಗಮವೇ ಕಾವ್ಯವಾಗಿದೆ ಎಂದು ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರಾದ ರಾಹುಲ್‌ಕುಮಾರ್ ಭಾವಿದೊಡ್ಡಿ ಅವರು ಹೇಳಿದರು.

ನಗರದ ಸರ್ಕಾರಿ ಆರ್ಟ್ಸ್ ಗ್ಯಾಲರಿಯಲ್ಲಿ ಬುಧವಾರ ಹಮ್ಮಿಕೊಂಡ ಬಯಕೆಯ ಬಳ್ಳಿ ಪುಸ್ತಕದ ಲೋಕಾರ್ಪಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಣ್ಣು ಮತ್ತು ಸಸಿ ಹಣ್ಣುಗಳ ಸಂರಕ್ಷಣೆ ಮತ್ತು ಪೋಷಣೆಯಲ್ಲಿ ತೊಡಗಿಸಿಕೊಂಡಿರುವ ಸಂಗೀತ ತೇಲಿ ಅವರು ಸಾಹಿತ್ಯದೊಂದಿಗೆ ಆಸಕ್ತಿ ಹೊಂದಿ ತಮ್ಮ ಚೊಚ್ಚಲ ಪುಸ್ತಕವನ್ನು ರಚಿಸಿರುವ ಇವರ ಸಾಹಿತ್ಯ ಪಯಣ ಯಶಸ್ವಿಯಾಗಲಿ, ಕನ್ನಡ ಸಾಂಸ್ಕೃತಿಕ ವಲಯದಲ್ಲಿ ಇವರು ಗುರುತಿಸಿಕೊಳ್ಳಲಿ ಎಂದು ಅವರು ಹೇಳಿದರು.

ಈ ಸಂದರ್ಭ ಸಾಹಿತಿ ಮನು ಪತ್ತಾರ ಮಾತನಾಡಿ, ಬಯಕೆಯ ಬಳ್ಳಿಯಲ್ಲಿ 30 ಹನಿ ಕವನಗಳು ಮಲ್ಲಿಗೆ ಹೂವಿನ ಪರಿಮಳ ಸೂಸುವ ಹಾಗೂ ಸತ್ಯ ಮಿಥ್ಯಗಳ ನಂಬಿಕೆ ಈ ಸಂದರ್ಭದಲ್ಲಿ ಕನಸು ನನಸಾಗುಗಳ ನಡುವೆ ಮೌನವಾಗಿ ಹೆಜ್ಜೆ ಹಾಕುತ್ತಲೆ ಬದುಕಿನ ಸಂದರ್ಶನವನ್ನು ಹೇಳಿಹೊರಟಿರುವ ಸಾಧ್ಯತೆಗಳು ಈ ಹನಿಕವನಗಳಲ್ಲಿ ಗೋಚರಿಸುತ್ತವೆ.

ಕಥೆ ಕಾದಂಬರಿ ಕುಟುಂಬದೊಂದಿಗೆ ಆತರತೆಯಿಂದ ಬೆರೆತುಕೊಳ್ಳಲು ಸಾಧ್ಯ. ಬೆಳಕು ನೀಡುವ ಹೃದಯ ಮನಸ್ಸಿಗೆ ಅರಳಿಸುವ ಕಾರ್ಯ ಕವಿ ಮಾಡುತ್ತಾನೆ. ಜಿಲ್ಲೆಯಲ್ಲಿ ಮಹಿಳೆಯರು ಸಾಹಿತ್ಯಿಕ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವುದು, ಕವಿತೆ ಓದುಗರಿಗೆ ಆಳವಾದ ಅನುಭಾವ ಸೃಷ್ಟಿಮಾಡುತ್ತದೆ. ಪ್ರೇರಣೆ ಕವಿತೆ ಶಬ್ಧಗಳೆಲ್ಲಾ ಅನುಭವದ ಜೊತೆಗೆ ಅನುಭಾವ ಕಟ್ಟಿಕೊಡುತ್ತದೆ. ಬಯಕೆಯ ಬಳ್ಳಿ ಪುಸ್ತಕದಲ್ಲಿನ ಎಲ್ಲ ಕವಿತೆಗಳು ಆಪ್ತ ಎನಿಸುತ್ತವೆ. ಹೂವಿನ ಹಾಗೆ ಅರಳಿ ಸುಗಂಧ ಸೂಸುತ್ತವೆ.

ಈ ಸಂದರ್ಭ ಪತ್ರಕರ್ತ ಪರಶುರಾಮ ಬಾಸಗಿ ಮಾತನಾಡಿ, ಬಯಕೆಯ ಬಳ್ಳಿಯ ಪುಸ್ತಕದಲ್ಲಿನ ಮಾಯೆಯ ಮರಳು ಕವನಗಳ ಸಾಲುಗಳನ್ನು ಓದುವ ಮೂಲಕ, ಓದುವ ಹವ್ಯಾಸ ಬೆಳೆಸಿಕೊಂಡರೆ ಜ್ಞಾನ ಹೆಚ್ಚುತ್ತವೆ. ಕವಿತೆಗಳು ಭಾವನೆಗಳ ಪ್ರತಿಬಿಂಬವಾಗಿವೆ ಎಂದರು.

ಆರ್.ಎಸ್ ಪಾಟೀಲ ಕೂಚಬಾಳ, ತೋಟಗಾ-ರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಬಸನಗೌಡ ಪಾಟೀಲ ಮಾತನಾಡಿದರು.

ಕವಯತ್ರಿ ಸಂಗೀತಾ ರಾ. ತೇಲಿ ಮಾತನಾಡಿ, ಬಯಕೆಯ ಬಳ್ಳಿ ಕೃತಿ ನನ್ನ ಚೊಚ್ಚಲ ಕವನ ಸಂಕಲನವಾಗಿದ್ದು, ಈ ಕೃತಿಯಲ್ಲಿ ನನ್ನ ಮನದಾಳದ ಭಾವನೆಗಳ ಜೊತೆಗೆ ಬದುಕಿನ ವಿವಿಧ ಅನುಭವ, ನೋವುಗಳು ಪ್ರತಿಬಿಂಬಿಸಿರುವೆ ಎಂದರು.

ಈ ಸಂದರ್ಭದಲ್ಲಿ ಸಹಾಯಕ ತೋಟಗಾ-ರಿಕೆ ನಿರ್ದೇಶಕರಾದ ಭಗವಂತ ಜಿಗಜಿಣಗಿ, ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದಶಕರಾದ ಅರವಿಂದ ಹೂಗಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಅಮರೇಶ ದೊಡಮನಿ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಶ್ರೀಮತಿ ಶಾಲಿನಿ ಎಸ್. ತಳಕೇರಿ, ರಾಯಗೊಂಡ ಶಿವಪ್ಪ ತೇಲಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಆಯುರ್ವೇದ ವಿದ್ಯಾರ್ಥಿಗಳು ಸಂಶೋಧನೆಗೆ ಹೆಚ್ಚು ಒತ್ತು ನೀಡಬೇಕು

## ನವದೆಹಲಿ ಎನ್.ಸಿ.ಐ.ಎಸ್.ಎಂ ಬೋರ್ಡ್ ಆಫ್ ಆಯುರ್ವೇದ ಅಧ್ಯಕ್ಷ ಡಾ. ಅಲ್ಲಮಪ್ರಭು ಗುಡ್ಡಾ ಸಲಹೆ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಆಯುರ್ವೇದದಲ್ಲಿ ಹೆಚ್ಚೆಚ್ಚು ಸಂಶೋಧನೆ ಕೈಗೊಳ್ಳುವ ಮೂಲಕ ಆರೋಗ್ಯ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಲು ಸಾಧ್ಯ ಎಂದು ನವದೆಹಲಿ ಎನ್.ಸಿ.ಐ.ಎಸ್.ಎಂ ಬೋರ್ಡ್ ಆಫ್ ಆಯುರ್ವೇದ ಅಧ್ಯಕ್ಷ ಡಾ. ಅಲ್ಲಮಪ್ರಭು ಗುಡ್ಡಾ ಹೇಳಿದ್ದಾರೆ. ಶನಿವಾರ ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಮಹಾವಿದ್ಯಾಲಯ ಆಸ್ಪತ್ರೆ ಮತ್ತು ಸಂಶೋಧನದ ಕೇಂದ್ರದ ವತಿಯಿಂದ ಬೆಂಗಳೂರು ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹಯೋಗದಲ್ಲಿ ವಚನ ಪಿತಾಮಹ ಡಾ. ಪಿ.ಜಿ. ಹಳಕಟ್ಟಿ ಇಂಜಿನಿಯರಿಂಗ್ ಕಾಲೇಜು ಸಭಾಂಗಣದಲ್ಲಿ ಆಯೋಜಿಸಲಾದ ರಾಷ್ಟ್ರಮಟ್ಟದ ಒಂದು ದಿನದ ವಿಚಾರ ಸಂಕಿರಣ ಅನುಸಂಧಾನ-11 ಉದ್ಘಾಟಿಸಿ ಅವರು ಮಾತನಾಡಿದರು.

ಆಯುರ್ವೇದ ವಿದ್ಯಾರ್ಥಿಗಳು ಸಂಶೋಧನೆಗೆ ಹೆಚ್ಚು ಒತ್ತು ನೀಡಬೇಕು. ಈ ಮೂಲಕ ಜನರಿಗೆ ಆಯುರ್ವೇದ ಚಿಕಿತ್ಸೆಯ ಹೆಚ್ಚೆಚ್ಚು ಲಾಭ ದೊರೆಯುವಂತೆ ಮಾಡಬೇಕು ಎಂದು ಅವರು ಹೇಳಿದರು. ಬೆಳಗಾವಿ ಕೆ.ಎಲ್.ಇ ಆಯುರ್ವೇದ ಕಾಲೇಜಿನ ಪ್ರಾಚಾರ್ಯ ಡಾ. ಸುಹಾಸಕುಮಾರ ಶೆಟ್ಟಿ, ಪುಣೆಯ ಭಾರತೀಯ ವಿದ್ಯಾಪೀಠದ ಪ್ರಾಚಾರ್ಯ ಡಾ. ಶೈಲೇಶ ದೇಶಪಾಂಡೆ, ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಸಂಖ್ಯಾಶಾಸ್ತ್ರಜ್ಞ ಡಾ. ಅಜಯಕುಮಾರ ರಂಗೋಲಿ ಅವರು ನಾನಾ ವಿಷಯಗಳ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ರಜಿಸ್ಟ್ರಾರ್ ಡಾ. ಆರ್. ವಿ. ಕುಲಕರ್ಣಿ, ನವದೆಹಲಿ ಬೋರ್ಡ ಆಫ್ ಆಯುರ್ವೇದ ಎನ್.ಸಿ.ಐ.ಎಸ್.ಎಂ ಮಾಜಿ ಅಧ್ಯಕ್ಷ ಬೆಳಗಾವಿ ಕೆ.ಎಲ್.ಇ ಮಾಜಿ ಅಧ್ಯಕ್ಷ ಡಾ. ಬಿ. ಶ್ರೀನಿವಾಸ ಪ್ರಸಾದ, ಕಾಲೇಜಿನ ಪ್ರಾಚಾರ್ಯ ಡಾ. ಅಶೋಕ ಪಾಟೀಲ, ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಸಂ-ಜಯ ಕಡ್ಲಿಮಟ್ಟಿ, ಉಪಪ್ರಾಚಾರ್ಯ ಡಾ. ಶಶಿಧರ ನಾಯಕ, ವೈದ್ಯರಾದ ಡಾ. ಪ್ರಮೋದ ಸಿ. ಬರಗಿ, ಡಾ.ಸತೀಶ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಈ ವಿಚಾರ ಸಂಕಿರಣದಲ್ಲಿ ದೇಶದ ನಾನಾ ರಾಜ್ಯಗಳ 400ಕ್ಕೂ ಹೆಚ್ಚು ಸ್ನಾತಕೋತ್ತರ ವೈದ್ಯಕೀಯ, ಯುನಾನಿ, ನರ್ಸಿಂಗ, ಫಾರ್ಮಸಿ ಸಂಶೋಧನೆ ವಿದ್ಯಾರ್ಥಿಗಳು ಪಾಲ್ಗೊಂಡರು.

# ಶಾಸಕ ಎಂ.ವೈ. ಪಾಟೀಲ್‌ರಿಗೆ ಅವಹೇಳನ: ಮಾಲಿಕಯ್ಯ ಗುತ್ತೇದಾರ್ ಕ್ಷಮೆ ಕೇಳಲು ಪ್ರಕಾಶ್ ಜಮಾದಾರ್ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಅಫಜಲಪುರ: ಕ್ಷೇತ್ರದ ಶಾಸಕ ಎಂ.ವೈ. ಪಾಟೀಲ್ ಅವರು ಉತ್ತಮವಾಗಿ ಆಡಳಿತ ಮಾಡುತ್ತಿದ್ದರೂ ಸಹ ಮಾಜಿ ಸಚಿವ ಮಾಲಿಕಯ್ಯ ಗುತ್ತೇದಾರ್ ಅವರು ಅಂತಹ ಹಿರಿಯ ಶಾಸಕರಿಗೆ ಮುನಿಮ್ ಎಂಬ ಪದ ಬಳಕೆ ಮಾಡಿದ್ದು ಸರಿಯಲ್ಲ. ಕೂಡಲೇ ತಮ್ಮ ತಪ್ಪು ಅರಿತುಕೊಂಡು ಅವರು ಕ್ಷಮೆ ಕೇಳಬೇಕು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಹಾಗೂ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲ್ಲೂಕು ಘಟಕದ ಅಧ್ಯಕ್ಷ ಪ್ರಕಾಶ್ ಜಮಾದಾರ್ ಅವರು ಒತ್ತಾಯಿಸಿದರು.

ಪಟ್ಟಣದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಲಿಕಯ್ಯ ಗುತ್ತೇದಾರ್ ಅವರು ತಮ್ಮ ನಡುವಳಿಕೆಯ ಕುರಿತು ಪರಾಮರ್ಶೆ ಮಾಡಿಕೊಳ್ಳದೇ ಆಧಾರ ರಹಿತವಾಗಿ ಶಾಸಕರಿಗೂ ಸೇ-ರಿದಂತೆ ಅವರ ಬೆಂಬಲಿಗರಿಗೆ ವಿನಾಕಾರಣ ಕ್ಷುಲ್ಲಕವಾಗಿ ನಿಂದಿಸುತ್ತಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮಾತು ಮಾತಿಗೆ ಮಾಲಿಕಯ್ಯ ಗುತ್ತೇದಾರ್ ಅವರು ಅಹಿಂದ್ ಕುರಿತು ಮಾತನಾಡುತ್ತಾರೆ. ಅವರು ಮಾಡಿದ್ದೇನು? ಎಂಬುದನ್ನು ಒಮ್ಮೆ ಆತ್ಮಾವಲೋಕನ ಮಾಡಿಕೊಳ್ಳಲಿ ಎಂದು ಹೇಳಿದ ಅವರು, ಕಳೆದ ಚುನಾವಣೆಯಲ್ಲಿ ಹಿಂದುಳಿದ ಪರವಾಗಿ ಜೆ.ಎಂ. ಕೊರಬು ಅವರು ಸ್ಪರ್ಧಿಸಿದಾಗ ಅವರ ವಿರುದ್ಧ ಮಾಲಿಕಯ್ಯ ಗುತ್ತೇದಾರ್ ಅವರು ಹೇಳಿಕೆಯನ್ನು ನೀಡಿದರು. ಅದೇ ರೀತಿ ಮಕಬೂಲ್ ಪಟೇಲ್ ಅವರು ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ಸ್ಪರ್ಧಿಸಿದಾಗ ಅವರನ್ನೂ ಸೋಲಿಸಿದರು ಎಂದು ಟೀಕಿಸಿದರು.

ನನಗೆ ಚೇಲಾ ಎಂದು ಮಾಲಿಕಯ್ಯ ಗುತ್ತೇದಾರ್ ಅವರು ದೂರಿದ್ದು ಆಕ್ಷೇಪಾರ್ಹವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಪ್ರಕಾಶ್ ಜಮಾದಾರ್ ಅವರು, ನನಗೆ ರಾಜಕೀಯವಾಗಿ ಬೆಳೆಯುವುದಕ್ಕೆ ಎಲ್ಲ ರೀತಿಯ ಬೆಂಬಲ ಹಾಗೂ ಸಹಕಾರವನ್ನು ಶಾಸಕ ಎಂ.ವೈ. ಪಾಟೀಲ್ ಹಾಗೂ ಅವರ ಪುತ್ರ ಅರುಣ-ಕುಮಾರ್ ಎಂ.ವೈ. ಪಾಟೀಲ್ ಅವರು ನೀಡಿದ್ದಾರೆ. ಹಾಗಾಗಿ ನಾನು ಅವರ ಬೆಂಬಲಿಗ ಹಾಗೂ ಅನುಯಾಯಿ ಎಂದು ತಿರುಗೇಟು ನೀಡಿದರು.

ಕೋಲಿ ಸಮಾಜದ ಹಿರಿಯ ಮುಖಂಡ ಹಾಗೂ ರಾಜ್ಯ ವಿಧಾನ ಪರಿಷತ್ ಮಾಜಿ ಮುಖ್ಯ ಸಚೇತಕ ದಿ. ವಿಠಲ್ ಹೇರೂರ್ ಅವರ ಮೇಲೆ ದಾಳಿಯಾದಾಗ ಅವರನ್ನು ಶಾಸಕ ಎಂ.ವೈ. ಪಾಟೀಲ್ ಅವರು ರಕ್ಷಿಸಿದರು. ಅಂದಿನಿಂದ ಇಲ್ಲಿಯವರೆಗೂ ನಾನು ಶಾಸಕ ಎಂ.ವೈ. ಪಾಟೀಲ್ ಅವರ ಬೆಂಬಲಿಗನಾಗಿದ್ದೇನೆ ಹೊರತು ಅವರ ಚೇಲಾ ಅಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಶಾಸಕ ಎಂ.ವೈ. ಪಾಟೀಲ್ ಅವರು ಅತ್ಯಂತ ಹಿರಿಯರು. ಎಂದಿಗೂ ಯಾರ ಮನಸ್ಸು ನೋಯಿಸಿದವರು ಅಲ್ಲ. ಅಂತವರಿಗೆ ಮುನೀಮ್ ಎಂದು ಟೀಕಿಸಿದ್ದು ಸರಿಯಲ್ಲ. ಇದೇ ಮಾಲಿಕಯ್ಯ ಗುತ್ತೇದಾರ್ ಅವರು ಶಾಸಕರಾಗಿದ್ದಾಗ ಬೆಂಗಳೂ-ರಿನಲ್ಲಿಯೇ ಹೆಚ್ಚು ಇರುತ್ತಿದ್ದರು. ಆ ಸಂದರ್ಭದಲ್ಲಿ ಅವರ ಸಹೋದರ ನಿತಿನ್ ಗುತ್ತೇದಾರ್ ಅವರೇ ಶಾಸಕರ ಕೆಲಸ ಕಾರ್ಯಗಳನ್ನು ಮಾಡುತ್ತಿದ್ದರು. ಹಾಗಾದರೆ ನಿತಿನ್ ಗುತ್ತೇದಾರ್ ಅವರು ಮುನೀಮೇ? ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಚಂದ್ರಶೇಖರ್ ಕರ್ಜಗಿ, ಮುಖಂಡರಾದ ಶಿವಾನಂದ್ ಗಾಡಿಸಾಹುಕಾರ್, ಮಹಿಬೂಬ್ ಪಟೇಲ್ ಕಲ್ಲೂರ್, ಶರಣು ಈಶ್ವರಗೊಂಡ, ಪ್ರವೀಣ್ ಕಲ್ಲೂರ್, ದತ್ತಾತ್ರೇಯ್ ಮಾತನಳ್ಳಿ ಮತ್ತು ಸಂಗನಗೌಡ ಪಾಟೀಲ್ ಮುಂತಾದವರು ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆ ಅಭಿವೃದ್ಧಿ ವೇದಿಕೆಯ ಹೋರಾಟಕ್ಕೆ ಬೆಂಬಲ: ಗೋರನಾಳಕರ್

■ ಉದಯರಶ್ಮಿ ದಿನಪತ್ರಿಕೆ

ಬೀದರ್: ಸರ್ಕಾರಿ ಶಾಲೆಗಳ ಉಳಿವು ಹಾಗೂ ಸರ್ವಾಂಗೀಣ ಅಭಿವೃದ್ಧಿಗಾಗಿ ಸರ್ಕಾರಿ ಶಾಲೆ ಅಭಿವೃದ್ಧಿ ವೇದಿಕೆ ಮತ್ತು ಕರ್ನಾಟಕ ಗ್ರಾಮೀಣ ಕೂಲಿಕಾರ್ಮಿಕರ ಸಂಘಟನೆ ಬೀದರ್ ವತಿಯಿಂದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಎದುರು ಏಪ್ರಿಲ್ 14ರಂದು ರಾತ್ರಿ 9 ಗಂಟೆಯಿಂದ ಪ್ರಾರಂಭಿಸಿದ ಅಹೋರಾತ್ರಿ ಹೋರಾಟಕ್ಕೆ ವಿವಿಧ ಸಂಘಟನೆಗಳು ಬೆಂಬಲ ಸೂಚಿಸಿವೆ.

ಬುಧವಾರ ಹೋರಾಟ ಸ್ಥಳಕ್ಕೆ ಭೇಟಿ ನೀಡಿದ ಮುಖಂಡರು, ಸರ್ಕಾರಗಳು ಸಂವಿಧಾನ ಮತ್ತು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಆಶಯಗಳಿಗೆ ವಿರುದ್ಧವಾಗಿ ಬಡವರು, ದಲಿತರು ಹಾಗೂ ಕಾರ್ಮಿಕರ ಮಕ್ಕಳಿಗೆ ಶಿಕ್ಷಣ ನೀಡುತ್ತಿರುವ ಸರ್ಕಾರಿ ಶಾಲೆಗಳನ್ನು ಮುಚ್ಚಲು ಮುಂದಾಗುತ್ತಿರುವುದನ್ನು ಖಂಡಿಸಿದರು.

ಹೋರಾಟಗಾರರು ಮುಂದಿಟ್ಟಿರುವ ಪ್ರಮುಖ ಬೇಡಿಕೆಗಳಲ್ಲಿ ಸರ್ಕಾರಿ ಶಾಲೆಗಳಿಗೆ ತಕ್ಷಣ ಶಿಕ್ಷಕರ ನೇಮಕಾತಿ ಮಾಡುವುದು, ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವುದು, ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸಲು ಕ್ರಮ ಕೈಗೊಳ್ಳುವುದು ಹಾಗೂ ಯಾವುದೇ ಕಾರಣಕ್ಕೂ ಸರ್ಕಾರಿ ಶಾಲೆಗಳನ್ನು ಮುಚ್ಚಬಾರದು ಎಂಬವು ಸೇರಿವೆ. ಹೋರಾಟಕ್ಕೆ ಬೆಂಬಲ ಸೂಚಿಸಿದ ಕರ್ನಾಟಕ ವಿದ್ಯಾವರ್ಧಕ ಸಂಘ ಹಾಗೂ ಕರ್ನಾಟಕ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮನ್ವಯ ವೇದಿಕೆ ಸಂಚಾಲಕ ಮಹೇಶ ಗೋರನಾಳಕರ್ ಅವರು, ಸರ್ಕಾರ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಉಗ್ರ ಹೋರಾಟ ನಡೆಸಿ ಕರ್ನಾಟಕ ಬಂದ್‌ಗೆ ಕರೆ ನೀಡಲಾಗುವುದು ಎಂದು ಎಚ್ಚರಿಸಿದರು.ಕನ್ನಡ ಸಾಹಿತ್ಯ ಪರಿಷತ್ತು ಕಾರ್ಯದರ್ಶಿ ಎಂ.ಎಸ್. ಮನೋಹರ್ ಅವರು ಮಾತನಾಡಿ, ಪ್ರಗತಿಪರ ಸಂಘಟನೆಗಳು ಮತ್ತು ಹೋರಾಟಗಾರರು ಹೆಚ್ಚಿನ ಸಂಖ್ಯೆಯಲ್ಲಿ ಈ ನ್ಯಾಯಯುತ ಹೋರಾಟಕ್ಕೆ ಬೆಂಬಲ ನೀಡಬೇಕು ಎಂದು ಕರೆ ನೀಡಿದರು.

### ವಿಜಯಪುರದಲ್ಲಿ ಕ್ಯಾನವಾಸ್ ಆರ್ಟ್ ಫೌಂಡೇಶನ್ ನಿಂದ ನಾಡಿನ ಶ್ರೇಷ್ಠ ಕಲಾವಿದರ ಕಲಾಕೃತಿಗಳ ಪ್ರದರ್ಶನ

# ಒಂದು ಕಲಾಕೃತಿ ಒಂದು ಕಾದಂಬರಿಗೆ ಸಮ :ಯಡಳ್ಳಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಕ್ಯಾನವಾಸ್ ಆರ್ಟ್ ಫೌಂಡೇಶನ್ ಸಂಸ್ಥೆಯು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಧನಸಹಾಯದೊಂದಿಗೆ ವಿಶ್ವ ದೃಶ್ಯಕಲಾ ದಿನಾಚರಣೆಯ ಅಂಗವಾಗಿ ಕ್ಯಾನವಾಸ್ ಆರ್ಟ್ ಫೌಂಡೇಶನ್ ನಾಡಿನ ಶ್ರೇಷ್ಠ ಕಲಾವಿದರ ಕಲಾಕೃತಿಗಳ ಪ್ರದರ್ಶನ ವಿಜಯಪುರದಲ್ಲಿ ಆಯೋಜಿಸಿರುವುದು ಅತ್ಯಂತ ಸಂತಸದ ಸಂಗತಿ. ಹಿರಿಯ ಮತ್ತು ಯುವ ಕಲಾವಿದರ ಕಲಾಕೃತಿಗಳು ಒಂದೆಡೆ ನೋಡಲು ಸಿಗುವುದು ಅಪರೂಪದ ಸಂಗತಿ. ಇಂಥ ಕಲಾಕೃತಿಗಳ ಪ್ರದರ್ಶನವನ್ನು ಉದ್ಘಾಟಿಸಲು ಸಂತೋಷವೆನಿಸುತ್ತದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ್ ಬೋವಿ ಹೇಳಿದರು. ಇಲಾಖೆಯಿಂದ ನೀಡುವ ಅನುದಾನವನ್ನು ಕಲಾವಿದರು ಸಂಘ ಸಂಸ್ಥೆಗಳು ಸರಿಯಾಗಿ ಉಪಯೋಗ ಮಾಡಿ ಸಮಾಜಕ್ಕೆ ಮಾದರಿಯಾಗುವ ಕೆಲಸ ಕಲಾವಿದರಿಂದ ಆಗಲಿ ಎಂದರು.

ಅತಿಥಿಗಳಾಗಿ ಆಗಮಿಸಿದ ವಿಜಯಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಅಶೋಕ್ ಯಡಳ್ಳಿ ಅವರು ಮಾತನಾಡುತ್ತಾ, ಇವತ್ತಿನ ಆಧುನಿಕ ಯುಗದಲ್ಲಿ ಎಐ ಜಗತ್ತಿನಲ್ಲಿ ಎಲ್ಲರೂ ಕ್ಷಣಿಕ ಸಂತಸಕ್ಕಾಗಿ ಆಧುನಿಕ ತಂತ್ರಜ್ಞಾನದ ಮೊರೆ ಹೋಗುತ್ತಿದ್ದಾರೆ. ಆದರೆ ಕಲಾವಿದರು ಸಮಾಜದ ಅಂಕುಡೊಂಕುಗಳನ್ನು ತಮ್ಮ ಕಲಾಕೃತಿಗಳ ಮೂಲಕ ಚಿತ್ರಿಸಿ ಸಮಾಜಕ್ಕೆ ಸಂದೇಶ ನೀಡುತ್ತ ಮಾದರಿಯಾಗುತ್ತಿದ್ದಾರೆ. ಕಲಾವಿದರಿಂದ ಸಮಾಜದ ಬೆಳವಣಿಗೆ ಸಾಧ್ಯವಾಗಿದೆ. ಒಂದು ಕಲಾಕೃತಿ ಒಂದು ವಿಶೇಷ ಅನುಭವವನ್ನೇ ನೀಡುತ್ತದೆ. ಒಂದು ಕಲಾಕೃತಿ ಒಂದು ಕಾದಂಬರಿಗೆ ಸಮ, ಸಾವಿರ ಪದಗಳಿಗೂ ಮೀರುವ ಶಕ್ತಿ ಒಂದು ಚಿತ್ರಕ್ಕೆಇದೆ ಅಂತಹ ಶ್ರೇಷ್ಠ ಕಲಾವಿದರ ಕಲಾಕೃತಿಗಳು ವಿಜಯಪುರದಲ್ಲಿ ನಡೆಯುತ್ತಿರುವುದು ಅದನ್ನು ವೀಕ್ಷಿಸುವುದು ನಮ್ಮ ಸೌಭಾಗ್ಯ ಎಂದರು. ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಅರವಿಂದ್ ಹೂಗಾರ್ ಮಾತನಾಡುತ್ತ, ನಮ್ಮ ಇಲಾಖೆಯಲ್ಲಿಯ ಈ ಗ್ಯಾಲರಿಯು ಕಲಾವಿದರಿಗೆ ಪ್ರೋತ್ಸಾಹ ನೀಡುವ ದೃಷ್ಟಿಯಿಂದ ನಿರ್ಮಿಸಿದ್ದು ಕಲಾವಿದರು ಇದರ ಸದುಪಯೋಗ ಪಡೆಯುತ್ತಿದ್ದಾರೆ ನಿರಂತರವಾಗಿ ಇಲ್ಲಿ ಪ್ರದರ್ಶನಗಳು ಕಲಾವಿದರು ನಡೆಸಬೇಕು ಅದಕ್ಕೆ ಎಲ್ಲ ರೀತಿಯ ಸಹಕಾರ ಮಾಡಲು ಇಲಖೆ ಸಿದ್ಧವಿದೆ ಎಂದರು.

ಇನ್ನೊರ್ವ ಅತಿಥಿಗಳಾಗಿ ಆಗಮಿಸಿದ ಹಿರಿಯ ಕಲಾವಿದರಾದ ಪಿ. ಎಸ್ ಕಡೇಮನಿ ಯವರು ಮಾತನಾಡುತ್ತಾ, ಈ ಕಲಾಪ್ರದರ್ಶನದಲ್ಲಿ ಇರುವ ಕಲಾಕೃತಿಗಳು ಬೇರೆ ಎಲ್ಲೂ ಪ್ರದರ್ಶನವಾಗಿಲ್ಲ ಅತ್ಯಂತ ಶ್ರೇಷ್ಠ ಹಿರಿಯ ಕಲಾವಿದರ ಕಲಾಕೃತಿಗಳು ಇಲ್ಲಿ ಪ್ರದರ್ಶನವಾಗುತ್ತಿರುವುದು ಇದನ್ನು ಏರ್ಪಡಿಸಿರುವ ಕ್ಯಾನ್ವಾಸ್ ಆರ್ಟ್ ಫೌಂಡೇಶನ್‌ಗೆ ಅಭಿನಂದನೆಗಳು. ಇಂಥಹ ಕಲಾಕೃತಿಗಳು ನೋಡಲು ಸಿಗುವುದು ಅಪರೂಪ ಅದರಲ್ಲೂ ಸಂಸ್ಥೆ ಈ ರೀತಿಯ ಕಲಾಕೃತಿಗಳನ್ನು ಸಂಗ್ರಹಿಸಿಟ್ಟಿರೋದು ಅತ್ಯಂತ ಶ್ರೇಷ್ಠ ಕೆಲಸ ವಿಜಯಪುರದ ಕಲಾವಿದರು ಕಲಾಸಕ್ತರು ಈ ಪ್ರದರ್ಶನವನ್ನು ಮರೆಯದೆ ವೀಕ್ಷಿಸಿ ಆಸ್ವಾದಿಸಬೇಕೆಂದು ವಿನಂತಿಸಿಕೊಂಡರು. ವಿದ್ಯಾಧರ ಸಾಲಿ ಎಲ್ಲರನ್ನು ಸ್ವಾಗತಿಸಿದರು. ಕ್ಯಾನ್ವಾಸ್ ಆರ್ಟ್ ಫೌಂಡೇಶನ್ ಕಾರ್ಯದರ್ಶಿ ರಮೇಶ ಚವ್ಹಾಣ ಪ್ರಾಸ್ತಾವಿಕವಾಗಿ ಮಾತನಾಡಿದರು.

### ಏ.19 ವರೆಗೆ ಕಲಾ ಪ್ರದರ್ಶನ

ಈ ಕಲಾ ಪ್ರದರ್ಶನವು ದಿನಾಂಕ 15-04-2026 ರಿಂದ 19-04-2026ರ ಮುಂಜಾನೆ 10 ರಿಂದ ಸಂಜೆ 5 ರ ವರೆಗೆ ಸಾರ್ವಜನಿಕರಿಗೆ ತೆರೆದಿರುತ್ತದೆ ಉಚಿತ ಪ್ರವೇಶವಿದೆ. ಎಲ್ಲ ಕಲಾಸಕ್ತರು ಆಗಮಿಸಿ ಈ ಅಪರೂಪದ ಕಲಾ ಪ್ರದರ್ಶನ ವೀಕ್ಷಿಸಲು ಸಂಘಟಕರು ಕೋರಿದ್ದಾರೆ.



### ಹೆಸರಾಂತ ಹಿರಿಯ ಕಲಾವಿದರ ಕಲಾಕೃತಿಗಳು

ಈ ಪ್ರದರ್ಶನದಲ್ಲಿ ನಮ್ಮ ನಾಡಿನ ಹೆಸರಾಂತ ಹಿರಿಯ ಕಲಾವಿದರುಗಳಾದ ಸೋಮಶೇಖರ ಸಾಲಿ, ಎಸ್.ಎಸ್.ಮುನ್ನೊಳ್ಳಿ, ಎಂ. ಬಿ. ಪಾಟೀಲ್, ಆರ್. ಎಂ. ಹಡಪದ, ವಿಜಯ ಸಿಂಧೂರ, ಪ್ರೊ. ಎಂ. ಜೆ. ಕಮಲಾಕ್ಷಿ, ವಿ. ಬಿ.ಹಿರೇಗೌಡರ್, ಎಂ. ಎಸ್. ಚಂದ್ರಶೇಖರ್, ವೈ. ಎಚ್. ಸೂಗೂರ, ಪಿ. ಎನ್. ಚೋಯಾಲ್, ಕೆ. ಬಾಲ್‌ಗೋಪಾಲನ್, ವಾಸುದೇವ ಕಾಮತ್, ಡಾ. ವಿ. ಜಿ. ಅಂದಾನಿ, ಎಂ. ಆರ್. ಬಾಳಿಕಾಯಿ, ಪಿ. ಎಸ್. ಪುಂಚಿತ್ತಾಯ, ಆರ್. ಎಂ. ಪಳನಿಯಪ್ಪನ್, ಪಿ. ಎಸ್. ಕಡೇಮನಿ, ಕೆ. ಕೆ. ಮಕಾಳಿ, ಎ. ಎಂ. ಪ್ರಕಾಶ, ಬಿ. ಕೆ. ಬಡಿಗೇರ, ವಿದ್ಯಾಧರ ಸಾಲಿ, ಶ್ರೀ ಎಂ ಮೋಹನ್, ದಯಾನಂದ ತಪಶೆಟ್ಟಿ, ಪ್ರಭಾಕರ್ ಎಲ್, ಬಿ. ಎಸ್. ಪಾಟೀಲ, ವಿಜಯರಾಜ ಬೋಧನಕರ್, ಅಂಬಾರಾಯ್ ಚಿನಮಳ್ಳಿ, ಬಾಬು ಜತ್ತಕರ್, ಕಮಲ್ ಅಹಮ್ಮದ, ಎಂ. ನಂದಬಸಪ್ಪ ವಾಡೆ, ಎಂ. ಜಿ. ಮಕಾನದಾರ್, ಕಂದನ್ ಜಿ, ಕೂಡಲ ಹಿರೇಮಠ, ರಾಘವೇಂದ್ರ ಪಾಟೀಲ, ಮಂಜುನಾಥ ವಾಲಿ, ಶ್ರೀಕಾಂತ ರಜಪೂತ, ರಮೇಶ ಚವ್ಹಾಣ ಲಿಂಗರಾಜ ಕಾಚಾಪುರ ಇವರೆಲ್ಲರ ಕಲಾಕೃತಿಗಳು ನೋಡುಗರನ್ನು ಮಂತ್ರಮುಗ್ಧರಾಗಿಸುತ್ತಿವೆ.

# ಧರ್ಮಗಳು ಹೃದಯದಲ್ಲಿ ಪ್ರೀತಿ ಹುಟ್ಟಿಸಬೇಕು :ಬಸವಲಿಂಗ ಶ್ರೀ

■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಧರ್ಮಗಳು ಹೃದಯದಲ್ಲಿ ಪ್ರೀತಿ ಹುಟ್ಟಿಸಬೇಕು, ಮನುಷ್ಯರನ್ನು ಒಡೆಯದೇ ಕೂಡಿಸಬೇಕು ಎಂದು ಶಿರೂರಿನ ವಿಜಯಮಹಾಂತ ತೀರ್ಥ ಮಠದ ಬಸವಲಿಂಗ ಸ್ವಾಮೀಜಿ ಅಭಿಪ್ರಾಯಪಟ್ಟರು.

ಆಲಮಟ್ಟಿ ಡ್ಯಾಂಸೈಟ್‌ನಲ್ಲಿ ಗುರುವಾರ ನಡೆದ ನವೀಕರಣಗೊಂಡ ಜಾಮೀಯಾ ಮಸೀದಿಯ ಉದ್ಘಾಟನೆ, ಮಸೀದಿ ದರ್ಶನ ಹಾಗೂ ಸೌಹಾರ್ದತಾ ಸಮಾರಂಭದಲ್ಲಿ ಅವರು ಮಾತನಾಡಿದರು.

"ಮುಸ್ಲಿಂರ ಏಕದೇವೋಪಾಸನೆ ಹಾಗೂ ಶರಣರ ಲಿಂಗ ಪೂಜೆ ಎರಡೂ ಒಂದೇ. ಒಬ್ಬ ಸಚ್ಚರಿತ ಮುಸಲ್ಮಾನನು ನಿಜವಾದ ಶರಣನಾಗಬಲ್ಲ. ಹಾಗೆಯೇ ಒಬ್ಬ ಸಚ್ಚರಿತ ಶರಣನು ಇಸ್ಲಾಂನ ಶಾಂತಿ ಮಂತ್ರವನ್ನು ಪಾಲಿಸುವವನಾಗಬಲ್ಲ" ಎಂದು ಸ್ವಾಮೀಜಿ ಹೇಳಿದರು.

ಬೀಳಗಿಯ ಹಜರತ್ ಮೌಲಾನಾ ಕಾಬತೆ ಅಬ್ದುಲ್ ವಹಾಬ್ ಸಾಬ್ ಮಾತನಾಡಿ, "ಅಲ್ಲಾ ಎಂದರೆ ಕೇವಲ ಆಕಾಶದಲ್ಲಿರುವ ಶಕ್ತಿ ಮಾತ್ರವಲ್ಲ, ಪ್ರೀತಿ, ದಯೆ ಮತ್ತು ನ್ಯಾಯದ ರೂಪದಲ್ಲಿ ಮನುಷ್ಯನ ಅಂತರಂಗದಲ್ಲಿ ನೆಲೆಸಿರುವ ಚೈತನ್ಯ. ಅಜಾನ್ ಮನುಷ್ಯನನ್ನು ಲೌಕಿಕ ಜಗತ್ತಿನಿಂದ ಪಾರಮಾರ್ಥಿಕ ಕಡೆಗೆ ಕರೆಯುವ ದನಿ. ಅಲ್ಲಾಹ್ ಎಂದರೆ ಒಂದೇ ಧರ್ಮಕ್ಕೆ ಸೀಮಿತವಲ್ಲ, ಅವನು ಜಗದೀಶ್ವರ" ಎಂದರು.



ಬಸವನಬಾಗೇವಾಡಿಯ ಮುಫ್ತಿ ಅಬ್ದುಲ್ ಅಜೀಜ್ ನಂದವಾಡಗಿ, ನಿಡಗುಂದಿಯ ಮೌಲಾನಾ ಆಸೀಫ್ ಚಪ್ಪರಬಂದ್, ಮೌಲಾನಾ ಇಬ್ರಾಹಿಂ ಚೌಧರಿ ಸಾನ್ನಿಧ್ಯ ವಹಿಸಿದ್ದರು.

ಸಿಂದಗಿಯ ಅಂಜುಮನ್ ಕಾಲೇಜಿನ ನಿವೃತ್ತ ಪ್ರಾಚಾರ್ಯ, ವಾಗ್ಮಿ ಎಂ.ಡಿ. ಬಳಗಾನೂರ ಮಾತನಾಡಿದರು.

ಆಲಮಟ್ಟಿ ಜಾಮೀಯಾ ಮಸೀದಿ ಕಮಿಟಿಯ ಅಧ್ಯಕ್ಷ ಎ.ಡಿ. ಮಕಾನದಾರ್ ಅಧ್ಯಕ್ಷತೆ ವಹಿಸಿದ್ದರು. ಸೂಪರಿಂಟೆಂಡಿಂಗ್ ಎಂಜಿನಿಯರ್ ಬಿ.ಎಸ್. ಪಾಟೀಲ, ಆರ್‌ಎಫ್‌ಒ ಮಹೇಶ ಪಾಟೀಲ, ನೌಕರರ ಸಂಘದ ಅಧ್ಯಕ್ಷ ಸದಾಶಿವ ದಳವಾಯಿ, ಸಹಾಯಕ ಕಮಾಂಡೆಂಟ್ ಈರಪ್ಪ ವಾಲಿ, ಪ್ರಾಚಾರ್ಯ ಪಿ.ಎ. ಹೇಮಗಿರಿಮಠ, ಪಿಎಸ್‌ಐ ಎಫ್.ಎಸ್. ಇಂಡಿಕರ, ದಾವಲ್ ಮಲೀಕ್ ನದಾಫ್, ನಿಸ್ಸಾರ್ ಪಿಂಜಾರ್, ರಾಯನಗೌಡ ಕರಿಗೌಡರ, ಎಂ.ಆರ್. ಕಮತಗಿ, ಯುಸೂಫ್ ಜೈನಾಪೂರ, ಇಮಾಮ್ ಸಾಬ್ ಸಾಲಿಮನಿ, ಇಸ್ಮಾಯಿಲ್ ಮುದ್ದೇಬಿಹಾಳ, ರಾಜಾ ಅಹ್ಮದ್ ಹಾದಿಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಮನೆಪಟ್ಟಿ ಮತ್ತು ವಸತಿ ಗಣತಿಗೆ ಚಾಲನೆ

■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ಕರ್ನಾಟಕದಲ್ಲಿ 2026ರ ಏಪ್ರಿಲ್ 16 ರಿಂದ ಮೇ 15 ರವರೆಗೆ ಮನೆಪಟ್ಟಿ ಮತ್ತು ವಸತಿ ಗಣತಿ (Census)ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಮೊದಲ ಮೂರು ದಿನ ಗ್ರಾಮದ ನಕ್ಷೆಯ ಜೊತೆಗೆ ಗಣತಿದಾರರಿಗೆ ಬಂದಂತಹ ಪ್ರದೇಶದಲ್ಲಿ ಲಭ್ಯವಿರುವ ಮನೆಗಳ, ರಸ್ತೆ, ಹಳ್ಳ, ಕೆರೆ, ಸಮುದಾಯ ಭವನ, ದೇವಸ್ಥಾನ ಸೇರಿದಂತೆ ಮನೆಪಟ್ಟಿ ತಯಾರಿಸಲು ಶಿಕ್ಷಕರು ಮನೆ ಮನೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ. ತಾಲ್ಲೂಕಿನ ಘೋಣಸಗಿ ಗ್ರಾಮ ಸೇರಿದಂತೆ ಎಲ್ಲ ಗ್ರಾಮಗಳಲ್ಲಿ ಬಿರು ಬಿಸಿಲಿನ ನಡುವೆಯೂ ರಜೆ ದಿನಗಳಲ್ಲಿ ಶಿಕ್ಷಕರು ಜನಗಣತಿ ಕಾರ್ಯ ಮಾಡುತ್ತಿದ್ದಾರೆ. ಆರಂಭದಲ್ಲಿ ಹಲವು ಶಿಕ್ಷಕರ ಮೊಬೈಲ್ ಲಾಗಿನದಲ್ಲಿ ತೊಂದರೆಯಾಗುತ್ತಿದೆ. ತಮಗೆ ವಹಿಸಿದ ನಕ್ಷೆ ಡೌನಲೋಡ್ ಆಗುತ್ತಿಲ್ಲ ಎಂದು ಶಿಕ್ಷಕರು ಮೇಲ್ವಿಚಾರಕರ ಗಮನಕ್ಕೆ ತಂದರು.

ಮೇಲ್ವಿಚಾರಕ ಐ.ಎ.ತೇಲಿ, ಗಣತಿದಾರ ಎಂ. ಎನ್.ಮದಬಾವಿ, ಸಾವಿತ್ರಿ ಆಕಳೆ, ನಾರಾಯಣ ಜಗತಾಪ, ಪಿ.ಎಸ್.ಗದ್ಯಾಳ, ಬಿಎ ರಾಜು ಹುನ್ನೂರ ಇದ್ದರು.

### ಅಕ್ರಮ ಕಟ್ಟಡ ಆರೋಪ । ಹುಣಸೂರು ಎಸಿ ಕಾವ್ಯರಾಣಿ ಸೂಚನೆ

# ಮಗ್ಗೆ-ಮಳಲಿ ಮಧ್ಯೆ ತಲೆಯೆತ್ತುತ್ತಿದ್ದ ಕಟ್ಟಡ ಕಾಮಗಾರಿ ಸ್ಥಗಿತ

■ ಉದಯರಶ್ಮಿ ದಿನಪತ್ರಿಕೆ

ಹೆಚ್ ಡಿ ಕೋಟೆ: ತಾಲೂಕಿನ ಮೈಸೂರು ಮಾನಂದವಾಡಿ ರಸ್ತೆ ಮಾರ್ಗ ಬರುವ ಮಗ್ಗೆ- ಮಳಲಿ ಗ್ರಾಮಗಳ ಮಧ್ಯೆ ನಿರ್ಮಾಣವಾಗುತ್ತಿರುವ ಹೋಟೆಲ್ ಕಟ್ಟಡ ಕಾಮಗಾರಿ ಸ್ಥಗಿತಗೊಳಿಸುವಂತೆ ಹುಣಸೂರು ಉಪವಿಭಾಗಧಿಕಾರಿ ಕಾವ್ಯರಾಣಿ ತಾಕೀತು ಮಾಡಿದ್ದಾರೆ.

ಸಾರ್ವಜನಿಕರಿಂದ ದೂರುಗಳ ಕೇಳಿಬಂದ ಹಿನ್ನೆಲೆ ಅಧಿಕಾರಿಗಳ ಜೊತೆ ಗುರುವಾರ ಸ್ಥಳಕ್ಕೆ ಬಂದ ಕಾವ್ಯರಾಣಿ. ಕಟ್ಟಡ ಕಾಮಗಾರಿ ಪರಿಶೀಲಿಸಿ, ಕೂಡಲೇ ಕಾಮಗಾರಿ ಸ್ಥಗಿತಕ್ಕೆ ಆದೇಶಿಸಿದರು. ಕಟ್ಟಡ ಮಾಲೀಕ ಲಕ್ಷ್ಮಿಪ್ರಸಾದ್ ಎಂಬುವರಿಗೆ ಕರೆಮಾಡಿ, ತತ್ ಕ್ಷಣವೇ ಕಾಮಗಾರಿ ನಿಲ್ಲಿಸಬೇಕು. ಇಲ್ಲದಿದ್ದಲ್ಲಿ ಮುಂದಿನ ಕಾನೂನು ಕ್ರಮ ಜರುಗಿಸಬೇಕಾಗುತ್ತದೆ. ಇದು ಸೂಕ್ಷ್ಮಪರಿಸರ ವಲಯ ವ್ಯಾಪ್ತಿಗೆ ಒಳಪಟ್ಟಿದ್ದು, ಕಟ್ಟಡ ನಿರ್ಮಾಣ ಮಾಡುವಂತಿಲ್ಲ. ಈ ಸಂಬಂಧ ಎರಡು ಬಾರಿ ನೋಟಿಸ್ ಕೂಡ ಜಾರಿ ಮಾಡಲಾಗಿದೆ. ಅಷ್ಟಾದರೂ ಕೂಡ ಕಾಮಗಾರಿ ಮುಂದುವರೆಸಿರುವುದು ಕಾನೂನು ಬಾಹಿರ. ಕಟ್ಟಡ ಕಾಮಗಾರಿ ಸಂಬಂಧ ದಾಖಲೆಗಳು ಇದ್ದರೆ ಪ್ರಾದೇಶಿಕ ಆಯುಕ್ತರ ಕಛೇರಿಯಿಂದ ಅನುಮತಿ ಪಡೆದು ಕಟ್ಟಡ ಕಾಮಗಾರಿ ಮುಂದುವರೆಸಿ ಎಂದು ಸೂಚನೆ ನೀಡಿ, ಕೂಲಿ ಕಾರ್ಮಿಕರನ್ನು ಹೊರಗೆ ಕಳುಹಿಸಿದರು. ಇದಕ್ಕೂ ಮುನ್ನ ತಹಸೀಲ್ದಾರ್ ಕಚೇರಿಯಲ್ಲಿ ಕಾವ್ಯಾರಾಣಿ, ಅಧಿಕಾರಿಗಳ ಜೊತೆ ಸಭೆ ನಡೆಸಿ, ರೆಸಾರ್ಟ್ ಗಳ ನಿರ್ಮಾಣಕ್ಕೆ ಒತ್ತುವರಿ ಜಾಗ ತೆರವು ಸಂಬಂಧ ವರದಿ ಕೇಳಿದರು. ಈ ವೇಳೆ ಕಬಿನಿ ಎಇಇ ಗಣೇಶ್ ಮಾತನಾಡಿ, ನಮ್ಮಲ್ಲಿ ಸದ್ಯಕ್ಕೆ ಆರು ರೆಸಾರ್ಟ್ ಗಳ ಒತ್ತುವರಿ ತೆರವು ಕಾರ್ಯ ಪೂರ್ಣಗೊಂಡಿದೆ. ಈ ಜಾಗದಲ್ಲಿ ಶಾಶ್ವತ ಕಟ್ಟಡ ನಿರ್ಮಾಣ ಮಾಡಿಲ್ಲ. ಒತ್ತುವರಿ ಜಾಗಗಳಲ್ಲಿ ಪಾರ್ಕ್ ನಿರ್ಮಾಣ ಮಾಡಿಕೊಂಡು ಕೆಲವೊಂದು ಅಲಂಕಾರಿಕ ಗಿಡಗಳನ್ನು ಬೆಳೆಸಿದ್ದಾರೆ. ಐದು ರೆಸಾರ್ಟ್ ಗಳ ಮಾಲೀಕರು ಕಬಿನಿ ಹಿನ್ನೀರಿನ ಪ್ರದೇಶ ಒತ್ತುವರಿ ಮಾಡಿಕೊಂಡಿದ್ದರು. ಆ ಜಾಗವನ್ನು ತೆರವುಗೊಳಿಸಿ, ಟ್ರಂಚ್ ಹೊಡೆಸಿ ಮುಳ್ಳುತಂತಿ ಬೇಲಿ ಹಾಕಿಸಿದ್ದೇವೆ. ಆದರೆ ವಾಟರ್ ಹುಡ್ ರೆಸಾರ್ಟ್ ನವರು ಹೈಕೋರ್ಟ್ ಮೊರೆಹೋಗಿದ್ದು, ಯಥಾಸ್ಥಿತಿ ಕಾಪಾಡಿಕೊಳ್ಳುವಂತೆ ನ್ಯಾಯಾಲಯ ಆದೇಶ ನೀಡಿದೆ. ಆದರೆ ಈ ಜಾಗದ ಮೂಲ ಮಾಲೀಕ 1 ಎಕರೆ 5 ಗುಂಟೆ ಜಮೀನನ್ನು ತನ್ನ ಆಸ್ತಿಯೆಂದು ರೆಸಾರ್ಟ್ ಮಾಲೀಕರಿಗೆ ಮಾರಾಟ ಮಾಡಿದ್ದಾನೆ ಎಂದು ಹೇಳಿದರು. ಈ ವೇಳೆ ತಹಸೀಲ್ದಾರ್ ಶ್ರೀನಿವಾಸ್, ಎಇಇ ಗಣೇಶ್, ಇಇ ಧರಣೇಶ್, ಮುಖ್ಯಾಧಿಕಾರಿ ಸುರೇಶ್, ಎಸಿಎಫ್ ಮಧು ದೇವಯ್ಯ, ಆಖಖ ಶಶಿಕುಮಾರ್,

ನಗರ ಯೋಜನಾ ಅಧಿಕಾರಿ ದೀಪಕ್, ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿ ಸುನಿಲ್, ಆರ್ ಐ ಯೋಗೀಶ್, ವಿಎ ನಾಗರಾಜ್, ಪರಶಿವ, ಪಿಡಿಒ ಚಿದಾನಂದ, ಮತ್ತಿತರರು ಹಾಜರಿದ್ದರು.



"ಇಲಾಖೆಯ ಕೈತಪ್ಪಿನಿಂದ ದಾಖಲೆಯಲ್ಲಿ ಸರಿಯಾಗಿ ನಮೂದು ಹಾಗೂ ಜಮೀನು ಇಂಡೀಕರಣ( ಇಂಡೀಕರಣ ಎಂದರೆ ಕಂದಾಯ ದಾಖಲೆಗಳಲ್ಲಿ (ಪಹಣಿ/ಖಖಿಅ) ಭೂಮಿಯ ಒಡೆತನ, ವಿಸ್ತೀರ್ಣ ಅಥವಾ ವರ್ಗಾವಣೆಯನ್ನು ಅಧಿಕೃತವಾಗಿ ದಾಖಲಿಸುವ ಪ್ರಕ್ರಿಯೆ) ಆಗದೇ ಇರುವುದರಿಂದ ಮಾಲೀಕ ತನ್ನದೆ ಆಸ್ತಿ ಎಂದು ರೆಸಾರ್ಟ್ ನವರಿಗೆ ಮಾರಾಟ ಮಾಡಿದ್ದಾನೆ. ತಕ್ಷಣವೇ ತಹಸೀಲ್ದಾರ್ ಮುಖಾಂತರ ಇಂಡೀಕರಣ ಮಾಡಿಸಿ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿ ಆ ಜಾಗವನ್ನು ತೆರವುಗೊಳಿಸುತ್ತೇವೆ."

■ ಗಣೇಶ್
ಕಬಿನಿ ಎಇಇ

# ಏ.21ರಂದು ಅಕ್ಕಮಹಾದೇವಿ ಮಹಿಳಾ ವಿವಿ 17ನೇ ವಾರ್ಷಿಕ ಘಟಿಕೋತ್ಸವ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಕುಲಪತಿಗಳು,ಸಿಂಡಿಕೇಟ್ ಹಾಗೂ ವಿದ್ಯಾವಿಷಯಕ ಪರಿಷತ್ತಿನ ಸಹಯೋಗದಲ್ಲಿ ಏ.21ರ ಬೆಳಿಗ್ಗೆ 11:30 ಗಂಟೆಗೆ ನಗರದ ಹೊರವಲಯದಲ್ಲಿರುವ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಕ್ಯಾಂಪಸ್‌ನಲ್ಲಿ ಆಯೋಜಿಸಲಾಗಿದೆ.

ಕನಾಟಕದ ರಾಜ್ಯಪಾಲರು ಹಾಗೂ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳಾದ ಗೌರವಾನ್ವಿತ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಅಗ್ರಾಸನ ವಹಿಸುವರು.

ಉನ್ನತ ಶಿಕ್ಷಣ ಸಚಿವರು ಹಾಗೂ ವಿಶ್ವವಿದ್ಯಾನಿಲಯದ ಸಮಕುಲಪತಿಗಳಾದ ಡಾ.ಎಂ.ಸಿ ಸುಧಾಕರ್ ಉಪಸ್ಥಿತರಿರುವರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮುಂಬೈನ(-ಎಸ್.ಎನ್.ಡಿಟಿ) ಮಹಿಳಾ ವಿಶ್ವವಿದ್ಯಾಲಯದ ಕುಲಪತಿಗಳಾದ ಶ್ರೀಮತಿ ನಾಥಿಬಾಯಿ ದಾಮೋದರ್ ಠಾಕರ್ಸಿ ಹಾಗೂ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ ವಿಜಯಾ ಬಿ. ಕೋರಿಶೆಟ್ಟಿ ಭಾಗವಹಿಸುವವರು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಕುಂದು-ಕೊರತೆಗಳ ಆಲಿಕೆಗೆ ಏ.18ರಂದು ಗ್ರಾಹಕರ ಸಂವಾದ ಸಭೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ವಿಜಯಪುರ ತಾಲೂಕಿನ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗಕ್ಕೆ ಸಂಬಂಧಿಸಿದಂತೆ ಏ.18ರಂದು ಮಧ್ಯಾಹ್ನ 3.30ಗಂಟೆಗೆ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಕಛೇರಿಯಲ್ಲಿ ರೈತರು ಹಾಗೂ ಗ್ರಾಹಕರೊಂದಿಗೆ ವಿದ್ಯುತ್ ಸಮಸ್ಯೆಗಳ ಪರಿಹಾರಕ್ಕೆ ಗ್ರಾಹಕರ ಸಂವಾದ ಸಭೆ ಆಯೋಜಿಸಲಾಗಿದೆ.

ಹೆಸ್ಕಾಂ ಗ್ರಾಮೀಣ ಉಪ ವಿಭಾಗದ ಕಛೇರಿಗೆ ಒಳಪಡುವ ಗ್ರಾಮಗಳ ಗ್ರಾಹಕರು ಹಾಗೂ ಸಾರ್ವಜನಿಕರು ಸಂವಾದ ಸಭೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳುವಂತೆ ವಿಜಯಪುರ ಗ್ರಾಮೀಣ ಉಪ ವಿಭಾಗದ ಹೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂಡಿಯ ಕೃಷ್ಣಾ ಮುಖ್ಯ ಕಾಲುವೆಗೆ ಒಂದು ಟಿಎಂಸಿ ನೀರು

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲೂಕಿನಲ್ಲಿ ಹರಿಯುವ ಕೃಷ್ಣಾ ಮುಖ್ಯ ಕಾಲುವೆಗೆ ಒಂದು ಟಿಎಂಸಿ ನೀರು ಹರಿಯ ಬಿಡಲಾಗಿದೆ ಎಂದು ಇಂಡಿಯ ಕಂದಾಯ ಉಪವಿಬಾಗಾಧಿಕಾರಿ ಚಿದಾನಂದ ಗುರುಸ್ವಾಮಿ ತಿಳಿಸಿದ್ದಾರೆ.

ವಿಭಾಗೀಯ ಆಯುಕ್ತರು ಕಲಬುರಗಿ ವಿಭಾಗ ಇವರು ಬೆಳಗಾವಿ ವಿಭಾಗೀಯ ಆಯುಕ್ತರ ಕೋರಿಯ ಮೇರೆಗೆ ನಾರಾಯಣ ಜಲಾಶಯದಿಂದ ಒಂದು ಟಿ.ಎಂ.ಸಿ ನೀರನ್ನು ಹರಿಸಿದ್ದಾರೆ.

ಕೆಬಿಜೆಎನ್‌ಎಲ್ ಅಧಿಕ್ಷಕ ಅಭಿಯಂತರ ಮನೋಜಕುಮಾರ ಗಡಬಳ್ಳಿ, ಇಂಡಿಯ ಶಾಸಕ ಯಶವಂತರಾಯಗೌಡ ಪಾಟೀಲರು ಮತ್ತು ನಾಗಠಾಣದ ಶಾಸಕ ವಿಠ್ಠಲ ಕಟಕದೊಂಡ ಇವರ ಪ್ರಯತ್ನದಿಂದ ನೀರು ಪಡೆಯಲಾಗಿದೆ.



ನೀರು ಈಗಾಗಲೇ ಏ. 11 ರಿಂದ ಕೃಷ್ಣಾ ಕಾಲುವೆಯಲ್ಲಿ ಹರಿಯುತ್ತಿದ್ದು ಒಂದು ಟಿಎಂಸಿ ಹೆಚ್ಚುವರಿ ನೀರಿನಿಂದ ಏ. 23 ರ ವರೆಗೆ ನೀರು ಕಾಲುವೆಯಲ್ಲಿ ಹರಿಯುತ್ತದೆ ಮತ್ತು ಈ ನೀರು ಕೇವಲ ಕುಡಿಯಲು ಮತ್ತು ಜನ ಜಾನುವಾರುಗಳು ಮಾತ್ರ ಉಪಯೋಗಿಸಲು ತಿಳಿಸಿದ್ದಾರೆ.

ಇಂದು ಕೃಷ್ಣಾ ಕಾಲುವೆ ಮೇಲೆ ಕಂದಾಯ ಉಪವಿಬಾಗಾಧಿಕಾರಿಗಳು ಬೇಟಿ ನೀಡಿ ಸಾಲೋಟಗಿಯಿಂದ ಮಾವಿನಹಳ್ಳಿಯ ವರೆಗೆ ಕಾಲುವೆಯನ್ನು ವಿಕ್ಷಿಸಿದರು.

ಇಒ ಭೀಮಾಶಂಕರ ಕನ್ನೂರ ಹೆಸ್ಕಾಂ ಎಇಇ ಎಸ್.ಆರ್.ಮೆಂಡೆಗಾರ, ಕೆಬಿಜೆಎನ್‌ಎಲ್ ಭೀರಪ್ಪ ಪೂಜಾರಿ ಮತ್ತಿತರಿದ್ದರು.

# ಗೊಬ್ಬರ ಅಂಗಡಿಗಳಿಗೆ ಕೃಷಿ ಅಧಿಕಾರಿಗಳ ಭೇಟಿ-ಪರಿಶೀಲನೆ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಇಂದು ಕೃಷಿ ಗೊಬ್ಬರ ದಾಸ್ತಾನು ಮಳಿಗೆಗಳಿಗೆ ಕೃಷಿ ಉಪ ನಿರ್ದೇಶಕ ಚಂದ್ರಕಾಂತ ಪವಾರ ಇವರ ನೇತೃತ್ವದಲ್ಲಿ ಭೇಟಿ ನೀಡಿದರು.

ಎ.ಸಿ.ಧನಶೆಟ್ಟಿ, ಶಾಂತು ಧನಶೆಟ್ಟಿ ಮತ್ತು ಪ್ರಕಾಸಗೌಡ ಬಿರಾದಾರ ಇವರ ಮಳಿಗೆಗಳಿಗೆ ಭೇಟಿ ನೀಡಿದರು.




ತಾಲೂಕಿನಲ್ಲಿ ಸಾಕಷ್ಟು ಪ್ರಮಾಣದಲ್ಲಿ ಗೊಬ್ಬರ ಸಂಗ್ರಹವಿದೆ. ಸರಿಯಾದ ದರಕ್ಕೆ ಗೊಬ್ಬರ ನೀಡಬೇಕು. ದರ ಪಟ್ಟಿ ಪ್ರಕಟಿಸಬೇಕು. ಅವಧಿ ಮುಗಿದ ಗೊಬ್ಬರ ನೀಡಬಾರದು. ಅಂತಹ ಪ್ರಕರಣ ರೈತರಿಂದ ಬಂದರೆ ಕ್ರಮ ಕೈಕೊಳ್ಳಲಾಗುವದು.

ಸರಕಾರ ನಿಗದಿ ಪಡಿಸಿದ ದರಕ್ಕೆ ಕೃಷಿ ಪರಿಕರ ನೀಡಬೇಕು. ಸ್ಟಾಕು ಲಗ್ತಿಸಬೇಕು ಎಂದರು.

ಸಹಾಯಕ ಕೃಷಿ ನಿರ್ದೇಶಕ ಮಹಾದೇವಪ್ಪ ಏವೂರ, ಕೃಷಿ ಅಧಿಕಾರಿ ಮಹಾಂತೇಶ ಶೆಟ್ಟೆನ್ನವರ ಮತ್ತಿತರಿದ್ದರು.

Printed by: AVINASH BIDARI, Published and owned by: SHAILA INDUSHEKHAR MANUR Printed at: ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. Published at: At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..Editor : INDUSHEKHAR MANUR